ಕನ್ನಡ ದಿನಪತ್ರಿಕೆ
02 ಜುಲೈ । ಮಂಗಳವಾರ
02 JULY 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕರು : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 5 ಸಂಚಿಕೆ – 116 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ಸಿಎಂ– ಡಿಸಿಎಂ ವಿಷಯ ಎತ್ತುವ ಶಾಸಕರಿಗೆ ನೋಟೀಸ್: ಡಿ.ಕೆ. ಶಿವಕುಮಾರ್

ಬೆಂಗಳೂರು: ಸಿಎಂ– ಡಿಸಿಎಂ ಬದಲಾವಣೆ ಕುರಿತು ಮಾತನಾಡುವ ಪಕ್ಷದ ಶಾಸಕರಿಗೆ ಇಷ್ಟರಲ್ಲೇ ನೋಟೀಸ್ ನೀಡುತ್ತೇವೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಜೊತೆಗೂ ಮಾತನಾಡಿದ್ದೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಕೆಪಿಸಿಸಿ ಪದಾಧಿಕಾರಿಗಳ ಸಭೆಯಲ್ಲಿ ಸಿಎಂ– ಡಿಸಿಎಂ ದಂಗಲ್ ವಿಚಾರ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯೊಬ್ಬರಿಂದ ಪ್ರಸ್ತಾಪವಾಯಿತು. ಸಿಎಂ, ಡಿಸಿಎಂ ಬದಲಾವಣೆ ಬಗ್ಗೆ ಮಾತನಾಡುವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಎಂದು ಪ್ರಧಾನ ಕಾರ್ಯದರ್ಶಿ ಒತ್ತಾಯ ಮಾಡಿದರು. ಪದಾಧಿಕಾರಿಗಳ ಪ್ರಸ್ತಾಪಕ್ಕೆ ಡಿಕೆ ಶಿವಕುಮಾರ್ ಖಡಕ್ ಉತ್ತರ ನೀಡಿದರು.

ಕೆಲವರಿಗೆ ಮೈಕ್ ಕಂಡ ತಕ್ಷಣ ಮಾತಾಡುವ ದೊಡ್ಡ ಚಟವಿದೆ. ಆದರೆ ಇದನ್ನು ಎಐಸಿಸಿ ಗಮನಿಸುತ್ತಿದೆ. ಗೊಂದಲ ಮೂಡಿಸುತ್ತಿರುವವರ ಬಗ್ಗೆ ಅರಿವಿದೆ. ಸಭೆಯಲ್ಲಿ ಶಾಸಕರಿಗೆ ನೋಟೀಸ್ ನೀಡಲಾಗುವುದು. ನಾನು ಮತ್ತು ಸಿಎಂ ಈ ಬಗ್ಗೆ ಮಾತಾಡಿದ್ದೇವೆ. ಸಿಎಂ ಜೊತೆಗೆ ಕೆಲವರ ಬಗ್ಗೆ ಮಾತಾಡಿದ್ದೇನೆ. ಶೀಘ್ರದಲ್ಲೇ ಕೆಲವು ಶಾಸಕರಿಗೆ ನೋಟೀಸ್ ನೀಡುತ್ತೇವೆ' ಎಂದು ಡಿಕೆಶಿ ನುಡಿದರು.

ಇದೇ ಸಂದರ್ಭದಲ್ಲಿ ಪಕ್ಷಾಧ್ಯಕ್ಷನಾಗಿ ತಮ್ಮ ಶ್ರಮದ ಬಗ್ಗೆ ಪದಾಧಿಕಾರಿಗಳಿಗೆ ಡಿಕೆ ಶಿವಕುಮಾರ್ ಮನವರಿಕೆ ಮಾಡಿಕೊಟ್ಟರು. 'ನಾನು ಅಧ್ಯಕ್ಷನಾಗುವ ಮೊದಲು ಪಕ್ಷ ಹೇಗಿತ್ತು, ಈಗ ಹೇಗಿದೆ ನೋಡಿ. ಸೋನಿಯಾ ಗಾಂಧಿ ಪಕ್ಷ ಸಂಕಷ್ಟದಲ್ಲಿದ್ದಾಗ ನನ್ನ ಅಧ್ಯಕ್ಷನನ್ನಾಗಿ ಮಾಡಿದರು. ಈಗ ಪಕ್ಷ ಸದೃಢವಾಗಿದೆ, ಇನ್ನಷ್ಟು ಬಲಿಷ್ಠ ಮಾಡುವ ಹೊಣೆಗಾರಿಕೆ ನನ್ನ ಮೇಲಿದೆ. ಯಾರೋ ಒಂದಿಬ್ಬರು ನನ್ನನ್ನು ಬಗ್ಗಿಸಬಹುದು ಅಂತ ಭಾವಿಸಿದ್ದರೆ ಅದು ಆಗದ ಕೆಲಸ' ಎಂದು ಶಿವಕುಮಾರ್ ಭರವಸೆ ನೀಡಿದರು.

ಭಯಂಕರ ಚಂಡ ಮಾರುತ: ಬಾರ್ಬಡೊಸ್ ಉಳಿದ ಇಂಡಿಯಾ ಆಟಗಾರರು



ಬಾರ್ಬಡೊಸ್: ಟಿ20 ವಿಶ್ವಕಪ್ ಗೆದ್ದ ಭಾರತ ತಂಡಕ್ಕೆ ತವರಿಗೆ ಮರಳಲು ತೊಂದರೆಯಾಗಿದೆ. ಚಂಡಮಾರುತ ಹಿನ್ನೆಲೆಯಲ್ಲಿ ಬಾರ್ಬಡೊಸ್ ಏರ್ಪೋರ್ಟ್‌ನಲ್ಲಿ ವಿಮಾನ ಸಂಚಾರವನ್ನು ಬಂದ್ ಮಾಡಲಾಗಿದ್ದು, ಸದ್ಯ ಟೀಂ ಇಂಡಿಯಾ ವಾಪಸ್ ಆಗೋದು ಕಷ್ಟವಾಗಿದೆ.

ಬಾರ್ಬಡೊಸ್ನಲ್ಲಿ ಭಾರೀ ಬಿರುಗಾಳಿ ಜೊತೆ ಮಳೆ ನಿರಂತರವಾಗಿ ಸುರಿಯುತ್ತಿವ ಕಾರಣ ಸಂಚಾರ ಸೇರಿದಂತೆ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಗಂಟೆಗೆ 130 ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸುತ್ತಿದೆ. ಈಗಾಗಲೇ ಟೀಂ ಇಂಡಿಯಾ ನ್ಯೂಯಾರ್ಕ್ ತಲುಪಬೇಕಿತ್ತು. ಭಾರೀ ಗಾಳಿ ಮಳೆ ಹಿನ್ನೆಲೆಯಲ್ಲಿ ಭಾರತ ತಂಡವು ನ್ಯೂಯಾರ್ಕ್ ಮೂಲಕ ಬರುವ ಪ್ಲಾನ್ ಕ್ಯಾನ್ಸಲ್ ಮಾಡಲಾಗಿದೆ ಎಂದು ವರದಿಗಳು ಹೇಳಿವೆ. ವಿಶೇಷ ವಿಮಾನದ ಮೂಲಕ ನೇರವಾಗಿ ದೆಹಲಿ ತಲುಪುವ ವ್ಯವಸ್ಥೆಗಳು ಆಗುತ್ತಿವೆ. ಆದರೆ ಸೈಕ್ಲೋನ್ ತೀವ್ರತೆ ಕಮ್ಮಿಯಾದ ಮೇಲೆಯೇ ಸರಿಯಾದ ನಿರ್ಧಾರ ಆಗಲಿದೆ. ಎಲ್ಲವೂ ಅಂದುಕೊಂಡಂತೆ ಆದರೆ ಜುಲೈ 3 ರಂದು ಟೀಂ ಇಂಡಿಯಾ ತಾಯ್ನಾಡಿಗೆ ಮರಳಲಿದೆ

ರೈಲು ಮಾರ್ಗ ಯೋಜನೆ ಶೀಘ್ರವಾಗಿ ಆರಂಭಿಸುವಂತೆ ರೈಲ್ವೆ ಸಚಿವರಿಗೆ ಜಗದೀಶ ಶೆಟ್ಟರ ಮನವಿ

ಬೆಳಗಾವಿ: ಬೆಳಗಾವಿ, ಕಿತ್ತೂರು, ಧಾರವಾಡ ಮಾರ್ಗಕ್ಕೆ ಹೊಸ ರೈಲು ಮಾರ್ಗ ಯೋಜನೆ ಶೀಘ್ರವಾಗಿ ಆರಂಭಿಸುವಂತೆ ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ ಅವರಿಗೆ ಬೆಳಗಾವಿ ಸಂಸದರಾದ ಜಗದೀಶ ಶೆಟ್ಟರ ಅವರು ಮನವಿ ಸಲ್ಲಿಸಿದರು.

ಎರಡು ವರ್ಷಗಳ ಹಿಂದೆ ಭೂಸ್ವಾಧೀನಕ್ಕಾಗಿ ಪ್ರಸ್ತಾವನೆಗಳನ್ನು ಸಲ್ಲಿಸುವ ಪ್ರಕ್ರಿಯೆಯ ನಂತರವೂ ರಾಜ್ಯ ಸರ್ಕಾರದಿಂದ ಯಾವುದೇ ಭೂಮಿಯನ್ನು ರೈಲ್ವೆ ಇಲಾಖೆ (SWR) ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿಲ್ಲ. ಬೆಳಗಾವಿ,ಕಿತ್ತೂರು,ಧಾರವಾಡ ಹೊಸ ರೈಲು ಮಾರ್ಗ ಯೋಜನೆ ಅನುಷ್ಠಾನಕ್ಕೆ ಅಗತ್ಯವಿದೆ.

ಯೋಜನೆಯನ್ನು ಶೀಘ್ರವಾಗಿ ಕಾರ್ಯಗತಗೊಳಿಸಲು ಅನುಕೂಲವಾಗುವಂತೆ ನೈರುತ್ಯ ರೈಲ್ವೆ–ಹುಬ್ಬಳ್ಳಿಯ ಅಧಿಕಾರಿಗಳಿಗೆ ಅಗತ್ಯವಿರುವ ಭೂಮಿಯನ್ನು ತ್ವರಿತವಾಗಿ ಹಸ್ತಾಂತರಿಸಲು ಕರ್ನಾಟಕ ರಾಜ್ಯ ಸರ್ಕಾರಕ್ಕೆ ಆರಂಭಿಕ ಕ್ರಮಗಳನ್ನು ಪ್ರಾರಂಭಿಸಲು ಈ ವಿಷಯವನ್ನು ಪರಿಶೀಲಿಸಲು ಮತ್ತು ಕರ್ನಾಟಕ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (VTU) ಮತ್ತು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ (RCU) ಸ್ಥಾಪನೆಯೊಂದಿಗೆ ಬೆಳಗಾವಿ ನಗರವು ಶೈಕ್ಷಣಿಕವಾಗಿ ಮುಂದುವರೆದಿದ್ದು ಜೊತೆಗೆ ಹಲವಾರು ಎಂಜಿನಿಯರಿಂಗ್ ಕಾಲೇಜುಗಳು, ವೈದ್ಯಕೀಯ ಮತ್ತು ದಂತ ಕಾಲೇಜುಗಳು ಮತ್ತು ಏಷ್ಯಾದ ಅತಿದೊಡ್ಡ ಮತ್ತು ಪ್ರತಿಷ್ಠಿತ ಕೆಎಲ್ಇ ಆಸ್ಪತ್ರೆ ನಗರದಲ್ಲಿದೆ. ನಗರವು ಕೈಗಾರಿಕಾವಾಗಿಯೂ ಮುಂದಿದೆ.

ಬೆಳಗಾವಿಯಲ್ಲಿ ಮರು ರೂಪಿಸಲಾದ ಹೊಸ ರೈಲು ನಿಲ್ದಾಣವು ಎಲ್ಲ ರೀತಿಯ ನೂತನ ಸೌಲಭ್ಯಗಳನ್ನು ಹೊಂದಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದ ನಿವಾಸಿಗಳ ಬೇಡಿಕೆಯ ಆಧಾರದ ಮೇರೆಗೆ ಬೆಳಗಾವಿ–ಬೆಂಗಳೂರು–ಬೆಳಗಾವಿ ವಂದೇ ಭಾರತ್ ಎಕ್ಸ್ಪ್ರೆಸ್ (ಬೆಳಗ್ಗೆ ಪ್ರಾರಂಭವಾಗಿ ಸಂಜೆ ಹಿಂತಿರುಗುತ್ತದೆ.) ಬೆಳಗಾವಿ–ಪುಣೆ–ಬೆಳಗಾವಿ ವಂದೇ ಭಾರತ್ ಎಕ್ಸ್ಪ್ರೆಸ್ (ಬೆಳಗ್ಗೆ ಪ್ರಾರಂಭವಾಗಿ ಸಂಜೆ ಹಿಂತಿರುಗುತ್ತದೆ.) ಬೆಳಗಾವಿ–ಅಯೋಧ್ಯೆ ಜೆಎನ್–ಬೆಳಗಾವಿ (ಜನವರಿ–2024 ರ ಸಮಯದಲ್ಲಿ ಅಯೋಧ್ಯಾ ನಗರದಲ್ಲಿ ಹೊಸ ಶ್ರೀರಾಮ ಮಂದಿರ ನಿರ್ಮಾಣವಾಗಿರುವುದರಿಂದ ಮತ್ತು ಶ್ರೀರಾಮ ಮಂದಿರಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಭೇಟಿ ನೀಡುವ ದೃಷ್ಟಿಯಿಂದ ಇದು ಸಂಪೂರ್ಣವಾಗಿ ಅವಶ್ಯಕವಾಗಿದೆ. ಬೆಳಗಾವಿ–ಪಂಢರಪುರ–ಬೆಳಗಾವಿ: ಸಾವಿರಾರು ಭಗವಾನ್ ಶ್ರೀ ವಿಟ್ಟಲ್ ರುಕ್ಮಿಣಿ ಭಕ್ತರು ಮಹಾರಾಷ್ಟ್ರ ರಾಜ್ಯದ ದೇವಸ್ಥಾನ ಪಟ್ಟಣ–ಪಂಢರಪುರವನ್ನು ತಲುಪಲು ಅನುಕೂಲವಾಗುವಂತೆ ಡೈಲಿ ಎಕ್ಸ್ಪ್ರೆಸ್ ರೈಲು.

ಬೆಳಗಾವಿ ನಗರದಿಂದ ಕೇರಳಕ್ಕೆ ಹೋಗುವ ಪ್ರಯಾಣಿಕರು ಮತ್ತು ಇಲ್ಲಿ ವಾಸಿಸುವ ಮಲಯಾಳಿಗಳ ಅನುಕೂಲಕ್ಕಾಗಿ ಹುಬ್ಬಳ್ಳಿ–ಕೊಚ್ಚಿವೆಲ್ಲಿ–ಹುಬ್ಬಳ್ಳಿ (ತೃ ಸಂಖ್ಯೆ: 12777/12778) ಸಾಪ್ತಾಹಿಕ ಎಕ್ಸ್ಪ್ರೆಸ್ ಅನ್ನು ಬೆಳಗಾವಿಯವರೆಗೆ ವಿಸ್ತರಿಸುವುದು.

ಬೆಳಗಾವಿ–ಚೆನ್ನೈ–ಬೆಳಗಾವಿ: ಡೈಲಿ ಸೂಪರ್ಫಾಸ್ಟ್ ಎಕ್ಸ್ಪ್ರೆಸ್ ರೈಲು. ಬೆಳಗಾವಿ–ವಾರಣಾಸಿ–ಬೆಳಗಾವಿ ಎಕ್ಸ್ಪ್ರೆಸ್ (ದ್ವಿ–ವಾರ) .ಬೆಳಗಾವಿ–ಜೋಧ್‌ಪುರ–ಬೆಳಗಾವಿ ಎಕ್ಸ್ಪ್ರೆಸ್ (ದ್ವಿ–ವಾರ) ಮಾರ್ಗಗಳಲ್ಲಿ ಹೊಸ ರೈಲುಗಳನ್ನು ಪರಿಚಯಿಸಬೇಕಾಗಿ ವಿನಂತಿಸುವದರ ಜೊತೆಗೆ ಬೆಳಗಾವಿ ಜಿಲ್ಲೆಯ ಸಮಗ್ರ ಅಭಿವೃದ್ಧಿ ಕುರಿತು ವಿವಿಧ ವಿಷಯಗಳನ್ನು ಕೇಂದ್ರ ಸಚಿವರೊಂದಿಗೆ ಸಂಸದ ಜಗದೀಶ್ ಶೆಟ್ಟರ್ ಅವರು ಚರ್ಚಿಸಿದರು.

ಸಿಎಂ ಸ್ಥಾನದಿಂದ ಸಿದ್ದರಾಮಯ್ಯರನ್ನ ಇಳಿಸಲು ಆಗುವುದಿಲ್ಲ: ರಾಯರೆಡ್ಡಿ

ಕಲಬುರಗಿ: ರಾಜ್ಯದಲ್ಲಿ ಸಿಎಂ ಬದಲಾವಣೆ, ಮೂರು ಜನ ಉಪಮುಖ್ಯಮಂತ್ರಿ ನೇಮಕ ಮಾಡುವ ಕುರಿತು ಮಾತನಾಡುವುದೇ ನಾನ್ ಸೆನ್ಸ್ ಎಂದು ಸಿಎಂ ಆರ್ಥಿಕ ಸಲಹೆಗಾರ ಬಸವರಾಜ್ ರಾಯರೇಡ್ಡಿ ಹೇಳಿದರು. ಸಭೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಅವರು, ಸುದ್ದಿಗಾರರೊಂದಿಗೆ ಮಾತನಾಡಿದರು. ಬದಲಾವಣೆ ವಿಚಾರ ಅನಾವಶ್ಯಕ. ಚಂದ್ರಶೇಖರ ಸ್ವಾಮೀಜಿ ಹೇಳಿರುವುದು ಸರಿಯಲ್ಲ. ಸ್ವಾಮೀಜಿಯಾದವರು ಮುಖ್ಯಮಂತ್ರಿ ಕೊಡಿ ಎಂದು ಹೇಳಲು ಯಾರು ಇವರು ಎಂದು ಪ್ರಶ್ನಿಸಿದರು. ಇವರೇನು ನಮ್ಮಪಕ್ಷದ ಶಾಸಕಾಂಗದ ನಾಯಕರೇ? ಹೈಕಮಾಂಡಾ? ಇವರು ಸ್ವಾಮೀಜಿ ಅವರು ಧರ್ಮ ಚಿಂತನೆಯಲ್ಲಿ ಇರಬೇಕು ಎಂದರು. ಇಂತಹ ಹುದ್ದೆಗಳ ಬಗ್ಗೆ ಸಾರ್ವಜನಿಕವಾಗಿ ಚರ್ಚೆ ಮಾಡುವುದು ಸರಿಯಲ್ಲ. ಇದು ಧಾರ್ಮಿಕ ಅಶಿಸ್ತು ತೋರಿಸುತ್ತದೆ. ಸಿಎಂ ಸಿದ್ದರಾಮಯ್ಯ ಒಳ್ಳೆಯ ಮುಖ್ಯಮಂತ್ರಿ. ಇನ್ನೂ ನಾಲ್ಕು ವರ್ಷ ಬದಲಾವಣೆ ಮಾಡದಿದ್ದರೆ ರಾಜ್ಯಕ್ಕೆ ಅನುಕೂಲವಾಗುತ್ತದೆ. ಸಿದ್ದರಾಮಯ್ಯರನ್ನ ಇಳಿಸಲು ಆಗುವುದಿಲ್ಲ ಎಂದರು. ಜಾತಿವಾರು ಡಿಸಿಎಂ ನೀಡುವ ವಿಚಾರವಾಗಿ ಪ್ರತಿಕ್ರಿಯಿಸಿ, ಮೂರು ಡಿಸಿಎಂ ಮಾಡಬಹುದು. ಇನ್ನೂ 32 ಜನರಿಗೆ ಮಾಡಬಹುದು. ಸಚಿವರಾದವರು ಎಲ್ಲರೂ ಡಿಸಿಎಂ ಆಗಬಹುದು. ಆ ಸ್ಥಾನದಲ್ಲಿ ಏನು ಪವರ್ ಇಲ್ಲ. ಇದು ವೈಭವೀಕರಣದ ಹುದ್ದೆ ಅಷ್ಟೆ ಕಾನೂನಿನಲ್ಲಿ ಬೆಲೆ ಇಲ್ಲ ಎಂದರು. ಉಪ ಮುಖ್ಯಮಂತ್ರಿ ಎನ್ನುವುದು ಒಂದು ಬೆಲೆ ಜಾಸ್ತಿ ಬರುತ್ತದೆಂಬ ಕಾರಣಕ್ಕೆ ಕೇಳುತ್ತಿರುವುದು ಅಷ್ಟೆ. ಈ ವಿಚಾರದ ಬಗ್ಗೆ ಚರ್ಚೆ ಮಾಡುವವರು ನಾನ್ ಸೆನ್ಸ್ ಅಷ್ಟೆ ಎಂದರು.

ಮಾನನಷ್ಟ ಮೊಕದ್ದಮೆ: ಮೇಧಾ ಪಾಟ್ಕರ್ ಗೆ ದೆಹಲಿ ಕೋರ್ಟ್ 5 ತಿಂಗಳು ಜೈಲು ಶಿಕ್ಷೆ

ನವದೆಹಲಿ: ಮಾನನಷ್ಟ ಮೊಕದ್ದಮೆಯೊಂದರಲ್ಲಿ ದೆಹಲಿ ಕೋರ್ಟ್ ಸಾಮಾಜಿಕ ಕಾರ್ಯಕರ್ತೆ ಮೇಧಾ ಪಾಟ್ಕರ್ ಗೆ 5 ತಿಂಗಳ ಜೈಲು ಶಿಕ್ಷೆ ಪ್ರಕಟಿಸಿದೆ.

23 ವರ್ಷಗಳ ಹಳೆಯ ಪ್ರಕರಣ ಇದಾಗಿದ್ದು, ದೆಹಲಿ ಲೆಫ್ಟಿನೆಂಟ್ ಗವರ್ನರ್ ಆಗಿರುವ ವಿಕೆ ಸಕ್ಸೇನಾ ಗುಜರಾತ್ ನ ಎನ್ ಜಿಒ ಮುಖ್ಯಸ್ಥರಾಗಿದ್ದಾಗ ಈ ಮೊಕದ್ದಮೆ ದಾಖಲಾಗಿತ್ತು. ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ರಾಘವ್ ಶರ್ಮಾ ಅವರು ಮೇಧಾ ಪಾಟ್ಕರ್ ಗೆ 10 ಲಕ್ಷ ರೂಪಾಯಿ ದಂಡವನ್ನೂ ವಿಧಿಸಿದ್ದಾರೆ. ನ್ಯಾಯಾಲಯವು ತನ್ನ ಮುಂದೆ ಇರುವ ಸಾಕ್ಷ್ಯಗಳನ್ನು ಮತ್ತು ಎರಡು ದಶಕಗಳಿಂದ ಪ್ರಕರಣದ ವಾಸ್ತವಾಂಶಗಳನ್ನು ಪರಿಗಣಿಸಿ ಪಾಟ್ಕರ್ ಅವರಿಗೆ ಶಿಕ್ಷೆ ವಿಧಿಸಿದೆ.

ಆದಾಗ್ಯೂ, ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಪಾಟ್ಕರ್‌ಗೆ ಅನುವು ಮಾಡಿಕೊಡಲು ನ್ಯಾಯಾಲಯ ಶಿಕ್ಷೆಯನ್ನು ಒಂದು ತಿಂಗಳ ಕಾಲ ಅಮಾನತುಗೊಳಿಸಿದೆ. ತಮ್ಮ ಮತ್ತು ನರ್ಮದಾ ಬಚಾವೋ ಆಂದೋಲನ **(NBA)** ವಿರುದ್ಧ ಜಾಹೀರಾತುಗಳನ್ನು ಪ್ರಕಟಿಸಿದ್ದಕ್ಕಾಗಿ ಪಾಟ್ಕರ್ ಮತ್ತು ಸಕ್ಸೇನಾ 2000 ರಿಂದ ಕಾನೂನು ಹೋರಾಟದಲ್ಲಿ ತೊಡಗಿದ್ದರು.

ಮೋದಿ, ಬಿಜೆಪಿ, ಆರ್ ಎಸ್ಎಸ್ ಮಾತ್ರ ಹಿಂದೂ ಸಮುದಾಯವಲ್ಲ: ರಾಹುಲ್ ಗಾಂಧಿ

ನವದೆಹಲಿ: ಮೋದಿ, ಬಿಜೆಪಿ, ಆರ್ ಎಸ್ಎಸ್ ಮಾತ್ರ ಇಡೀ ಹಿಂದೂ ಸಮುದಾಯವಲ್ಲ ಎಂದು ಲೋಕಸಭೆಯಲ್ಲಿ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಭಾರತದ ಪರಿಕಲ್ಪನೆ, ಸಂವಿಧಾನ, ಸಂವಿಧಾನದ ಮೇಲಿನ ದಾಳಿಯನ್ನು ತಡೆಯಲು ಮುಂದಾದವರ ಮೇಲೆ ವ್ಯವಸ್ಥಿತ ಪೂರ್ಣಪ್ರಮಾಣದ ದಾಳಿಗಳು ನಡೆದಿವೆ ಎಂದು ರಾಹುಲ್ ಗಾಂಧಿ ಸದನದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ನಮ್ಮಲ್ಲಿ ಹಲವರ ಮೇಲೆ ವೈಯಕ್ತಿಕ ದಾಳಿ ನಡೆದಿದೆ. ಇನ್ನೂ ಕೆಲವು ನಾಯಕರು ಜೈಲಿನಲ್ಲಿದ್ದಾರೆ. ಅಧಿಕಾರ ಮತ್ತು ಸಂಪತ್ತಿನ ಕೇಂದ್ರೀಕರಣ, ಬಡವರು ಮತ್ತು ದಲಿತರು ಮತ್ತು ಅಲ್ಪಸಂಖ್ಯಾತರ ಮೇಲಿನ ಆಕ್ರಮಣದ ಕಲ್ಪನೆಯನ್ನು ವಿರೋಧಿಸಿದ ಯಾರಾದರೂ ಹತ್ತಿಕ್ಕಲ್ಪಟ್ಟರು. ಗುರುನಾನಕ್, ಬುದ್ಧ, ಮಹಾವೀರ ಸೇರಿದಂತೆ ಭಾರತದಲ್ಲಿ ಯಾವುದೇ ಮಹಾಪುರುಷರ ಉದಾಹರಣೆ ನೋಡಿದರೂ ಅವರೆಲ್ಲರೂ ಅಹಿಂಸೆಯನ್ನು ಬೋಧಿಸಿದರು, ಹಿಂಸೆಯನ್ನು ವಿರೋಧಿಸಿದವರಾಗಿದ್ದಾರೆ. ಆದರೆ ಕೇಂದ್ರ ಸರ್ಕಾರದಲ್ಲಿರುವ, ಹಿಂದೂಗಳೆಂದು ಕರೆದುಕೊಳ್ಳುವವರು ಹಿಂದೂ ಧರ್ಮದ ಮೂಲಭೂತವಾದ ಅಂಶ ಅಹಿಂಸೆಗೆ ವಿರುದ್ಧವಾಗಿ ಹಿಂಸೆಯನ್ನು ಪ್ರಚೋದಿಸುತ್ತಿದ್ದಾರೆ ಎಂದು ರಾಹುಲ್ ಗಾಂಧಿ ಪ್ರಧಾನಿ ಮೋದಿ, ಬಿಜೆಪಿ, ಆರ್ ಎಸ್ಎಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಇದಕ್ಕೆ ಸದನದಲ್ಲೇ ಆಕ್ಷೇಪ ವ್ಯಕ್ತಪಡಿಸಿದ ಪ್ರಧಾನಿ ನರೇಂದ್ರ ಮೋದಿ, ಇಡೀ ಹಿಂದೂ ಸಮಾಜವನ್ನು ಹಿಂಸೆಗೆ ಹೋಲಿಕೆ ಮಾಡುವುದು ಗಂಭೀರವಾದ ವಿಷಯ ಎಂದು ಹೇಳಿದರು. ತಕ್ಷಣವೇ ಪ್ರತಿಕ್ರಿಯೆ ನೀಡಿದ ರಾಹುಲ್ ಗಾಂಧಿ ಮೋದಿ, ಬಿಜೆಪಿ, ಆರ್ ಎಸ್ಎಸ್ ಮಾತ್ರ ಇಡೀ ಹಿಂದೂ ಸಮುದಾಯವಲ್ಲ ಎಂದು ಹೇಳಿದ್ದಾರೆ.

"(ಮಹಾತ್ಮ) ಗಾಂಧಿ ಸತ್ತಿದ್ದಾರೆ ಮತ್ತು ಗಾಂಧಿಯವರು ಚಲನಚಿತ್ರದಿಂದ ಪುನರುಜ್ಜೀವನಗೊಂಡಿದ್ದಾರೆ ಎಂದು ಪ್ರಧಾನಿ ಹೇಳುತ್ತಾರೆ. ಈ ಅಜ್ಞಾನವನ್ನು ನೀವು ಅಥರ್ಮಾಡಿಕೊಳ್ಳುತ್ತೀರಾ?' ನಾನು ಗಮನಿಸಿದ ಇನ್ನೊಂದು ವಿಷಯವೆಂದರೆ ಅದು ಕೇವಲ ಒಂದು ಧರ್ಮವಲ್ಲ, ಎಲ್ಲಾ ಧರ್ಮಗಳು ಅಭಯದ ಬಗ್ಗೆ ಮಾತನಾಡುತ್ತವೆ ಎಂದು ಹೇಳಿದ್ದಾರೆ.

ತಪ್ಪು ಮಾಡಿದವರ ರಕ್ಷಣೆಗೆ ಸರ್ಕಾರ ನಿಂತಿಲ್ಲ: ಗೃಹ ಸಚಿವ ಪರಮೇಶ್ವರ್

ಬೆಂಗಳೂರು: ದರ್ಶನ್ ಪ್ರಕರಕ್ಕೆ ತೋರಿಸಿರುವ ಆಸಕ್ತಿ ವಾಲ್ಮಿಕಿ ನಿಗಮದ ಅಕ್ರಮದ ಪ್ರಕರಣಕ್ಕೆ ನೀಡುತ್ತಿಲ್ಲ ಎಂಬ ಬಿಜೆಪಿಯವರ ಆರೋಪ ಇದೆ. ತಪ್ಪು ಮಾಡಿದವರ ರಕ್ಷಣೆಗೆ ಸರ್ಕಾರ ನಿಂತಿಲ್ಲ. ತಪ್ಪು ಮಾಡಿದವರು ಯಾರೇ ಆಗಿದ್ದರೂ ಕಾನೂನು ಪ್ರಕಾರ ಕ್ರಮ ಜರುಗಲಿದೆ. ಅಧಿಕಾರಿಗಳು ಆಗಿರಬಹುದು ಅಥವಾ ರಾಜಕೀಯ ವ್ಯಕ್ತಿಗಳು ಇರಬಹುದು, ಯಾರೇ ಇದ್ದರೂ ಕ್ರಮ ಜರುಗಿಸುವುದು ಖಚಿತ ಎಂದು ಗೃಹ ಸಚಿವರಾದ ಡಾ. ಜಿ ಪರಮೇಶ್ವರ್ ತಿಳಿಸಿದರು.

ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಜಾರಿಯಾಗಿರುವ ಮೂರು ಹೊಸ ಅಪರಾಧ ಕಾನೂನುಗಳ ಪರಿಣಾಮದ ಬಗ್ಗೆ ಈಗಲೇ ಹೇಳಲು ಬರುವುದಿಲ್ಲ. ಇಂದಿನಿಂದ ದಾಖಲಾಗುವ ಪ್ರಕರಣಗಳಿಗೆ ಹೊಸ ಕಾನೂನುಗಳು ಅನ್ವಯವಾಗಲಿವೆ. ಹೊಸ ಕಾಯ್ದೆಗಳ ಸಕ್ಸಸ್ ಅಥವಾ ಫೇಲ್ಯೂರ್ ಈಗಲೇ ಗೊತ್ತಾಗುವುದಿಲ್ಲ. ಪ್ರಕರಣಗಳು ದಾಖಲಾದ ಬಳಿಕ ಕೋರ್ಟ್‌ನಲ್ಲಿ ಯಾವ ರೀತಿ ತೆಗೆದುಕೊಳ್ಳುತ್ತಾರೆ ಎಂಬುದನ್ನು ನೋಡಬೇಕು. ಇಡೀ ದೇಶದಲ್ಲಿ ಜಾರಿ ಮಾಡಿರುವುದರಿಂದ ಎಲ್ಲ ಕಡೆ ಈ ಬಗ್ಗೆ ಪ್ರತಿಕ್ರಿಯೆ ಬರಬೇಕು. ಸರ್ಕಾರ ಕೆಲ ಪರಿಷ್ಕರಣೆ ಮಾಡಬಹುದು ಎಂದು ಹೇಳಿದರು.

ಹೊಸ ಕಾನೂನುಗಳ ಬಗ್ಗೆ ಇಲಾಖೆಯ ಎಲ್ಲ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ. ಪೊಲೀಸರಿಗಾಗಿ ಹೊಸದಾಗಿ ಮೊಬೈಲ್ ಅಪ್ಲಿಕೇಷನ್ ಸಿದ್ಧಪಡಿಸಲಾಗಿದೆ. ಪೊಲೀಸರಿಗೆ ಹೊಂದಿಕೆ ಆಗೋವರೆಗೂ ಈ ಆಯಪ್ ನೋಡಿಕೊಂಡು ಕೆಲಸ

ಮಾಡಲು ಸಹಾಯವಾಗಲಿದೆ ಎಂದರು.

ಕಾನ್‌ಸ್ಟೇಬಲ್‌ಗಳ ಅಂತರ ಜಿಲ್ಲಾ ವರ್ಗಾವಣೆಗೆ ನಿಯಮಗ

ಯುವಕನೊಂದಿಗೆ ಯುವತಿ ನಾಪತ್ತೆ: ಪೋಷಕರಿಂದ ಕಿಡ್ನಾಪ್ ದೂರು ದಾಖಲು

ಬೆಂಗಳೂರು: ಪ್ರೀತಿಸುವ ನಾಟಕವಾಡಿ ಬಾಲಕಿಯನ್ನು ಕಿಡ್ನಾಪ್ ಮಾಡಲಾಗಿದೆ ಎಂದು ಆರೋಪಿಸಿ ಕೊಡಿಗೇಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಅಪ್ರಾಪ್ತ ವಯಸ್ಸಿನ ಹುಡುಗಿಯ ಪೋಷಕರು ದೂರು ನೀಡಿದ್ದಾರೆ. ಹುಡುಗಿ ಮುಸ್ಲಿಮಳಾಗಿದ್ದು, ಆಕೆಯ ಜೊತೆಗೆ ತೆರಳಿರುವ ಹುಡುಗ ಹಿಂದೂ ಧರ್ಮದವನಾಗಿದ್ದಾನೆ. ರಜಿಯಾ ಹಾಗು ಅಬ್ದುಲ್ ರಹಿಂ ಎಂಬುವವರ ಹದಿನಾರು ವರ್ಷದ ಪುತ್ರಿಯನ್ನು ಶಂಕರ್ ಎಂಬಾತ ಕಿಡ್ನಾಪ್ ಮಾಡಿದ್ದಾನೆ ಎಂದು ದೂರು ಸಲ್ಲಿಸಲಾಗಿದೆ. ಕಳೆದ ಹದಿನಾಲ್ಕು ದಿನಗಳಿಂದ ಬಾಲಕಿ ಸಿಗದೆ ಪೋಷಕರು ಕಂಗಾಲಾಗಿದ್ದಾರೆ. ಪೋಷಕರು ಈಕೆಯನ್ನು ಕಾಲೇಜಿಗೆ ಬಿಟ್ಟು ಬಂದಿದ್ದರು. ನಂತರ ಕಾಲೇಜಿನಿಂದ ವಾಪಸ್ ಬಾರದ ಹಿನ್ನೆಲೆಯಲ್ಲಿ ಕುಟುಂಬಸ್ಥರಿಂದ ಹುಡುಕಾಟ ನಡೆದಿದೆ. ಮೊಬೈಲ್ ಕೂಡ ಸ್ವಿಚ್ ಆಫ್ ಆದ ಹಿನ್ನೆಲೆಯಲ್ಲಿ ಪೋಷಕರು ಪೊಲೀಸರಿಗೆ ದೂರು ನೀಡಿದ್ದಾರೆ. ಹುಡುಗಿಯನ್ನು ಹುಡುಗ ಬೈಕ್‌ನಲ್ಲಿ ಕರೆದೊಯ್ದಿರುವ ಶಂಕೆ ಇದೆ. ಮೊಬೈಲ್ ಟ್ರೇಸ್ ಮಾಡಿ ಪರಿಶೀಲನೆ ನಡೆಸಿದಾಗ ಚಿಕ್ಕಬಳ್ಳಾಪುರದಲ್ಲಿ ಶಂಕರ್ ಬೈಕ್ ಪತ್ತೆಯಾಗಿದೆ. ಸಿಸಿಟಿವಿ ಪರಿಶೀಲನೆ ನಡೆಸಿದಾಗ ಆಂಧ್ರದ ಕರ್ನೂಲ್ ಬಸ್ಸು ಹತ್ತಿ ತೆರಳಿರುವುದು ಪತ್ತೆಯಾಗಿದೆ. ಹೀಗಾಗಿ ಆಂದ್ರಪ್ರದೇಶಕ್ಕೆ ತೆರಳಿ ತಲೆ ಮರೆಸಿಕೊಂಡಿರಬಹುದು ಎಂದು ತರ್ಕಿಸಲಾಗಿದೆ.

ಬಾಲಕ ನಾಪತ್ತೆ: ಪತ್ತೆಗೆ ಮನವಿ

ಬಳ್ಳಾರಿ> ಕೌಲ್ಬಜಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಕಂಟೋನ್ಮೆಂಟ್ನ ಸರ್ಕಾರಿ ಬುದ್ದಿಮಾಂದ್ಯ ಬಾಲಕರ ಬಾಲಮಂದಿರದ ಆಕಾಶ್ ಎನ್ನುವ 13 ವರ್ಷದ ಅಪ್ರಾಪ್ತ ಬಾಲಕ ಜೂ.27 ರಂದು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್ಪೆಕ್ಟರ್ ಅವರು ತಿಳಿಸಿದ್ದಾರೆ. ಚಹರೆ ಗುರುತು: ಎತ್ತರ 5 ಅಡಿ, ತೆಳುವಾದ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕಾಣೆಯಾದ ಸಂದರ್ಭದಲ್ಲಿ ನೀಲಿ ಬೂದಿ ಬಣ್ಣದ ಅಂಗಿ, ನೀಲಿ ಬಣ್ಣದ ಬರ್ಮೋಡ ಧರಿಸಿದ್ದು, ಹಿಂದಿ ಭಾಷೆ ಮಾತನಾಡುತ್ತಾನೆ. ಕಾಣೆಯಾದ ಬಾಲಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ಬಜಾರ್ ಪೊಲೀಸ್ ಠಾಣೆಯ ದೂ.08392-240731, 24415, ಪಿಐ ಮೊ.9480803047, ಪಿಎಸ್‌ಐ ದೂ.94808203085 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಸಿಎಂ ಹುದ್ದೆ ರದ್ದುಪಡಿಸಿ, ಇಲ್ಲವೇ ಸುವರ್ಣ ವಿಧಾನಸೌಧಕ್ಕೆ ಸಿಎಂ ನೇಮಿಸಿ: ಭೀಮಪ್ಪ

ಬೆಳಗಾವಿ: 'ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆ ಮಾನ್ಯತೆ ಬಗ್ಗೆ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್) ಹಾಕಲು ಯೋಜಿಸಿದ್ದೇನೆ. ಇದಕ್ಕಾಗಿ ಮುಖ್ಯಮಂತ್ರಿ ಹಾಗೂ ಸಚಿವರಿಗೆ ಪತ್ರ ಬರೆದಿದ್ದೇನೆ. ಅವರ ಅಭಿಪ್ರಾಯ ಆಧರಿಸಿ ಮುಂದುವರಿಯುತ್ತೇನೆ' ಎಂದು ಸಾಮಾಜಿಕ ಕಾರ್ಯಕರ್ತ ಭೀಮಪ್ಪ ಗಡಾದ ಹೇಳಿದರು.

ಇಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸಂವಿಧಾನದಲ್ಲಿ ಡಿಸಿಎಂ ಹುದ್ದೆ ಬಗ್ಗೆ ಉಲ್ಲೇಖವೇ ಇಲ್ಲ. ಆದರೂ, ರಾಜ್ಯ ಸರ್ಕಾರ ಒಬ್ಬರನ್ನು ಡಿಸಿಎಂ ಮಾಡಿದೆ. ಅಲ್ಲದೆ,

ಈಗ ಹಲವು ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ ಬಗ್ಗೆ ಮಾತನಾಡುತ್ತಿದ್ದಾರೆ.

ಹಾಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಜಿ.ಪರಮೇಶ್ವರ, ಎಚ್.ಕೆ.ಪಾಟೀಲ, ಸತೀಶ ಜಾರಕಿಹೊಳಿ, ಕೆ.ರಾಜಣ್ಣ ಅವರಿಗೆ ಪತ್ರ ಬರೆದಿದ್ದೇನೆ.

ಸರ್ಕಾರ ಸಂವಿಧಾನಬದ್ಧವಾಗಿ ಆಡಳಿತ ನಡೆಸುತ್ತಿದೆಯೋ ಅಥವಾ ಸಾಂಪ್ರದಾಯಿಕವಾಗಿ ನಡೆದುಕೊಳ್ಳುತ್ತಿದೆಯೋ ಎಂಬುದನ್ನು ಸ್ಪಷ್ಟಪಡಿಸಬೇಕು' ಎಂದು ಆಗ್ರಹಿಸಿದರು.

'ನಿಯಮ ಬಾಹಿರವಾಗಿ ಸೃಷ್ಟಿಸಿದ ಡಿಸಿಎಂ ಹುದ್ದೆಯನ್ನು ಕಾಂಗ್ರೆಸ್ ಸರ್ಕಾರ ರದ್ದುಪಡಿಸಬೇಕು. ಇಲ್ಲದಿದ್ದರೆ ಬೆಳಗಾವಿಯ ಸುವರ್ಣ ವಿಧಾನಸೌಧಕ್ಕೆ ಒಬ್ಬರು ಮುಖ್ಯಮಂತ್ರಿ ಹಾಗೂ ನಾಲ್ವರು ಉಪಮುಖ್ಯಮಂತ್ರಿ ನೇಮಿಸಬೇಕು' ಎಂದೂ ಒತ್ತಾಯಿಸಿದರು.

'ಸಂವಿಧಾನದ ಆಶಯಗಳಿಗೆ ಪೂರಕವಾಗಿ ಪ್ರಮಾಣವಚನ ಸ್ವೀಕರಿಸಿದ ಸಚಿವರು, ಅದಕ್ಕೆ ಬದ್ಧವಾಗಿ ನಡೆದುಕೊಳ್ಳಬೇಕು.

ಆದರೆ, ಸಂವಿಧಾನದಲ್ಲಿ ಉಲ್ಲೇಖವೇ ಇರದ ಉಪಮುಖ್ಯಮಂತ್ರಿ ಹುದ್ದೆ ಬಗ್ಗೆ ಹೇಳಿಕೆ ನೀಡುತ್ತಿರುವುಷು ಸರಿಯಲ್ಲ' ಎಂದು ಆರೋಪಿಸಿದರು.

ಇಂದಿನಿಂದ ಬಿಎನ್‌ಎಸ್ ಉಲ್ಲೇಖಿಸಿ ಎಫ್‌ಐಆರ್

ಬೆಂಗಳೂರು: ಹೊಸ ಮೂರು ಕ್ರಿಮಿನಲ್ ಅಪರಾಧ ಕಾನೂನುಗಳು ಸೋಮವಾರದಿಂದ ಜಾರಿಗೆ ಬರುತ್ತಿದ್ದು, ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಲಂಗಳ ಅಡಿಯಲ್ಲಿ ಪ್ರಕರಣ ದಾಖಲಿಸುವಂತೆ ಪೊಲೀಸರಿಗೆ ಸೂಚನೆ ನೀಡಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಬಿ.ದಯಾನಂದ ತಿಳಿಸಿದ್ದಾರೆ.

ಬಿಎನ್‌ಎಸ್ ಕಾಯ್ದೆಗಳ ಅನುಷ್ಠಾನ ಕುರಿತು ಈಗಾಗಲೇ ಇಲಾಖೆ ಎಲ್ಲ ಹಂತದ ಅಧಿಕಾರಿ ಹಾಗೂ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ಜತೆಗೆ, ಮೈಸೂರು ಪೊಲೀಸ್ ಅಕಾಡೆಮಿಯಿಂದ ಕನ್ನಡದಲ್ಲೇ ಹೊಸ ಕಾಯ್ದೆಗಳ ಕನ್ನಡ ಕೈಪಿಡಿ ಸಿದ್ದಪಡಿಸಿ ವಿತ-ರಿಸಲಾಗಿದೆ. ಅದೇ ಪ್ರಕಾರ ಸೋಮವಾರದಿಂದ ಪೊಲೀಸರು ಬಿಎನ್‌ಎಸ್ ಕಾಯ್ದೆಗಳನ್ನು ಉಲ್ಲೇಖಿಸಿ ಎಫ್‌ಐಆರ್ ದಾಖಲಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಹೊಸ ಕಾಯ್ದೆ ಹಾಗೂ ಕಲಂಗಳು ಎಫ್‌ಐಆರ್‌ನಲ್ಲಿ ಮಾತ್ರವಲ್ಲದೆ, ಪೊಲೀಸ್ ಐ.ಟಿ (ವೆಬ್‌ಸೈಟ್)ಯಲ್ಲೂ ಬದಲಾವಣೆ ಆಗಿದೆ. ಎಫ್‌ಐಆರ್ ಜತೆಗೆ ಇಲ್ಲಿಯೂ ಬಿಎನ್-ಎಸ್, ಬಿಎನ್‌ಎಸ್‌ಎಸ್ ಮತ್ತು ಬಿಎಸ್‌ಎ ಕಾಯ್ದೆಗಳ ಬಗ್ಗೆಯೂ ಸಾರ್ವಜನಿಕರಿಗೆ ಮಾಹಿತಿ



ಲಭ್ಯವಾಗುವಂತೆ ಸಿದ್ದಪಡಿಸಲಾಗಿದೆ. ಪೊಲೀಸ್ ಐ.ಟಿ ಸಂಪೂರ್ಣವಾಗಿ ಬದಲಾಗಿ, ಹೊಸ ಸ್ವರೂಪದಲ್ಲಿ ಲಭ್ಯವಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಕಾನೂನು ಕಾಲೇಜುಗಳು ಉಪನ್ಯಾಸಕರು, ನಿವೃತ್ತ ನ್ಯಾಯಮೂರ್ತಿಗಳ ಮೂಲಕ ಯಾವ ಅಪರಾಧಕ್ಕೆ ಯಾವ ಕಾಯ್ದೆ ಅಳವಡಿಸಬೇಕು? ಈ ಹೊಸ ಕಾಯ್ದೆಗಳು ಹಾಗೂ ಕಲಂಗಳ ಬಗ್ಗೆ ತರಬೇತಿ ನೀಡಲಾಗಿದೆ. ಕಾರ್ಯಾಗಾರಗಳು, ವಿಚಾರಸಂಕಿರಣಗಳು, ತರಬೇತಿ ಶಿಬಿರಗಳು, ಕಾನೂನು ತಜ್ಞರೊಂದಿಗೆ ಸಂವಾದ ಏರ್ಪಡಿಸಿ ಅರಿವು ಮೂಡಿಸಲಾಗಿದೆ. ಈ ಹೊಸ ಕಾಯ್ದೆಗಳ ಬಗ್ಗೆ ಕಳೆದ ಒಂದೂವರೆ ತಿಂಗಳಿಂದ ಕಾನ್‌ಸ್ಟೆಬಲ್‌ನಿಂದ ಎಸ್ಪಿ/ಡಿಸಿಪಿ ಹಂತದ ಅಧಿಕಾ-ರಿಗಳಿಗೆ ಹಂತ ಹಂತವಾಗಿ ತರಬೇತಿ ನೀಡಲಾಗಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಡೆಂಗ್ಯೂ, ಮಲೇರಿಯಾ ಮತ್ತು ಚಿಕನಗುನಿಯಾ ತಡೆಗಟ್ಟಲು ಲಸಿಕೆ ಅಭಿಯಾನ

ಬೆಳಗಾವಿ: ಬೆಳಗಾವಿಯ ಮಾರ್ಕಂಡೇಯ ಪ್ರೌಢ ಶಾಲೆ ಮಾರ್ಕೆಟ ಯಾರ್ಡನಲ್ಲಿ ಶೇಖ ಹೋಮಿಯೋಪತಿ ಕಾಲೇಜು ವತಿಯಿಂದ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿ-ತ್ತು. ಅಪಾಯಕಾರಿ ರೋಗಗಳ ತಡೆಗೆ ಬಿಜೆಪಿ ರಾಜ್ಯಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಅನಿಲ ಬೆನಕೆ ನೇತೃತ್ವದಲ್ಲಿ ಉಚಿತ ಡೆಂಗ್ಯೂ, ಮಲೇರಿಯಾ ಮತ್ತು ಚಿಕನಗುನಿಯಾ ಲಸಿಕೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಅನಿಲ ಬೆನಕೆ ಡಾ. ಗಿರೀಶ ಮತು ಡಾ. ಆರ್.ಪಿ. ಶಾಸ್ತ್ರಿ ಅವರೊಂದಿಗೆ ಉಪಸ್ಥಿತರಿರುವ ಎಲ್ಲ ವೈದ್ಯರನ್ನು ಸನ್ಮಾನಿಸಿ ಅವರ ಪರಿಣತಿ ಮತ್ತು ಮಾನವೀಯ ಮನೋಭಾವನೆಯಿಂದ ನಮಗೆ ಸ್ಫೂರ್ತಿ ನೀಡುತ್ತಿರುವ ಭಾರತದವಲ್ಲಾ ವೈದ್ಯರಿಗೆ ಶುಭಾಶಯ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಶೇಖ ಹೋಮಿಯೋಪತಿ ಕಾಲೇಜಿನ ವೈದ್ಯ ಸಿಬ್ಬಂದಿ, ಮಾರ್ಕಂಡೇಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ನೀಲಾ ಚೌಗುಲೆ, ನಗರ ಸೇವಕಿ ರೇಷ್ಮಾ ಪ್ರವೀಣ ಪಾಟೀಲ, ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಶಿಲ್ಪಾ ಕೇಕರ, ಬಿಜೆಪಿ ಪದಾಧಿಕಾರಿಗಳಾದ ಸಂತೋಷ ಬೋರಕರ, ಅಶೋಕ ಥೋರಾಟ, ಶೀಲಾ ಗಡಕರಿ, ಆದಿತ್ಯ ಪಾಟೀಲ, ಶೈಲಾ ಮುತ್ತಣ್ಣವರ, ಸಿಮಾ ಜೋಶಿ, ಪ್ರವೀಣ ಪಾಟೀಲ, ಯುವಕ ಮಂಡಳ, ಮಹಿಳಾ ಮಂಡಳ, ಪಂಚ ಮಂಡಳಿ ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ನಾಳೆಯಿಂದ ಎಂಕ್ಯೂರ್ಫಾರ್ಮಾ ಸ್ಯುಟಿಕಲ್ಸ್'ನ ಐಪಿಒ ಮಾರಾಟ

ಮುಂಬೈ: ಎಂಕ್ಯೂರ್ಫಾರ್ಮಾ ಸ್ಯುಟಿಕಲ್ಸ್ ಲಿಮಿಟೆಡ್' ಈ ಕ್ವಿಟಿಷೇರುಗಳ ಆರಂಭಿಕ ಸಾರ್ವಜನಿಕ ಮಾರಾಟವನ್ನು ಜು.3 ರಂದು ಆರಂಭಿಸಲು ಪ್ರಸ್ತಾಪಿಸಿದೆ. ಬಿಡ್ / ಆಫರ್ಮುಕ್ತಾಯ ದಿನಾಂಕ ಶುಕ್ರವಾರ, ಜು.5, 2024 ಆಗಿರುತ್ತದೆ.

ಮಾರಾಟದ ಪ್ರೈಸ್ಬ್ಯಾಂಡ್ ಅನ್ನು ಪ್ರತಿ ಈ ಕ್ವಿಟಿಷೇರಿಗೆ 960 ರೂ.ನಿಂದ 1008 ರೂ.ವರೆಗೆ ನಿಗದಿ ಪಡಿಸಲಾಗಿದೆ. ಕನಿಷ್ಠ 14 ಈ ಕ್ವಿಟಿಷೇರುಗಳು ಮತ್ತು 14 ಈಕ್ವಿಟಿಷೇರುಗಳ ಗುಣಕಗಳಲಿ ಬಿಡ್ಸಲಿ ಸಬಹುದು.

ಈ ಆರಂಭಿಕ ಷೇರು ಮಾರಾಟವು ಎಂಕ್ಯೂರ್ಫಾರ್ಮಾ ಸ್ಯುಟಿಕಲ್ಸ್ ಲಿಮಿಟೆಡ್'ಯ 10 ರೂ. ಮುಖ ಬೆಲೆಯವರೆಗಿನ ಈ ಕ್ವಿಟಿಷೇರುಗಳನ್ನು ಪ್ರತಿಷೇರಿಗೆ ದರದಲ್ಲಿ ಮಾರಾಟ ಒಳಗೊಂಡಿದ್ದು, ಒಟ್ಟು ದಶ ಲಕ್ಷರೂ. ವರೆಗಿನ ಮೌಲ್ಯದ ಈ ಕ್ವಿಟಿಷೇರುಗಳ

ಮಾರಾಟ ಪ್ರಸ್ತಾಪವನ್ನು ಹೊಂದಲಾಗಿದೆ. ಇದು8,000.00 ದಶಲಕ್ಷ ರೂ.ವರೆಗಿನ ಕಂಪನಿಯ10 ರೂ. ಮುಖಬೆಲೆಯ ಈ ಕ್ವಿಟಿಷೇರುಗಳ ಹೊಸ 'ವಿತರಣೆಯನ್ನು ಒಳಗೊಂಡಿದೆ ಮತು ತಲಾ 10 ರೂ. ಮುಖಬೆಲೆಯ 11,428,839 ಈ ಕ್ವಿಟಿಷೇರುಗಳನ್ನು ಮಾರಾಟ ಮಾಡುವ ಪ್ರಸ್ತಾಪವನ್ನು ಒಳಗೊಂಡಿದೆ. ಇದರಲ್ಲಿ ಸಮಿತ್ಸ ತೀರ್ಶೈಹ್ತಾ ಅವರಿಂದ ತಲಾ 10 ರೂ. ಮುಖಬೆಲೆಯ ವರೆಗಿನ 420,000 ಈ ಕ್ವಿಟಿಷೇರುಗಳು, ನಮಿತಾ ವಿಕಾಸ್ಥಾಪರ್ ಅವರಿಂದ ತಲಾ 10 ರೂ. ಮುಖಬೆಲೆಯ ವರೆಗಿನ 1,268,600 ಈ ಕ್ವಿಟಿ ಷೇರುಗಳು; ಸಮಿತ್ಸ ತೀರ್ಶೈಹ್ತಾ ಅವರಿಂದ 10 ರೂ. ಮುಖಬೆಲೆಯ ವರೆಗಿನ 10,000 ಷೇರುಗಳು; ಸುನೀಲ್ರಜ ನೀಕಾಂತ್ಹೈಹ್ತಾ ಅವ-ರಿಂದ ತಲಾ ರೂ 10 ಮುಖಬೆಲೆಯ ವರೆಗಿನ 40,000 ಈ ಕ್ವಿಟಿಷೇರುಗಳು ,ಬಿ.ಸಿ. ಇನ್ವೆಸ್ಟ್ಮೆಂಟ್ಸ್ IV ಲಿಮಿಟೆಡ್ನಿಂದ ತಲಾ ರೂ 10 ಮುಖಬೆಲೆಯ ವರೆಗಿನ 7,234,085 ಈ ಕ್ವಿಟಿಷೇರುಗಳು, ಆರ್-ಎಚ್ಪಿಅನುಬಂಧ-ಎಅಡಿಯಲಿ ನಿಗದಿ ಪಡಿಸಿದಂತೆ ಪ್ರವರ್ತಕ ಮಾರಾಟಗಾರ ಷೇರುದಾರರ ಗುಂಪಿನಿಂದ ತಲಾ 10 ರೂ. ಮುಖಬೆಲೆಯ ವರೆಗಿನ 1,342,586 ಈ ಕ್ವಿಟಿಷೇರುಗಳು, ಅರುಣ್ಕುಮಾ ಪುರುಷೋತ್ತಮ್ಲಾಲ್ಪನ್ನಾ ಅವರಿಂದ ತಲಾ 10 ರೂ. ಮುಖಬೆಲೆಯ ವರೆಗಿನ 300,000 ಈ ಕ್ವಿಟಿಷೇರುಗಳು;ಮತ್ತು ಆರ್‌ಎಚ್ಪಿ'ಯ ಅನು ಬಂಧದ ಅಡಿಯಲ್ಲಿ ನಿಗದಿಪಡಿಸಿದಂತೆ ಇತರ ಮಾರಾಟಗಾರ ಷೇರುದಾರರಿಂದ ತಲಾ 10ರೂ. ಮುಖಬೆಲೆಯ ವರೆಗಿನ 813,568 ಈ ಕ್ವಿಟಿಷೇರುಗಳ ಮಾರಾಟವನ್ನು ಒಳಗೊಂಡಿದೆ.

ಒಟ್ಟಾರೆಯಾಗಿ, ಪ್ರವರ್ತಕ ಮಾರಾಟಗಾರ ಷೇರುದಾರರು, ಪ್ರವರ್ತಕ ಮಾರಾಟಗಾರ ಷೇರು ದಾರರಗುಂಪು, ವೈಯಕ್ತಿಕ ಮಾರಾಟಗಾರ ಷೇರುದಾರರು ಮತು ಹೂಡಿಕೆ ದಾಮಾರಾಟಗಾರ ಷೇರು ದಾರರನ್ನು, "ಮಾರಾಟಗಾರ ಷೇರುದಾರರು" ಎಂದು ಕರೆಯಲಾಗುವುದು ಮತ್ತು ವೈಯಕ್ತಿಕ ವಾಗಿಯೂ" ಮಾರಾಟಗಾರ ಷೇರುದಾರರು" ಎನ್ನಲಾಗುವುದು. ಮಾರಾಟಗಾರ ಷೇರುದಾರರು ತಲಾ 10 ರೂ. ಮುಖಬೆಲೆಯ ಈ ಕ್ವಿಟಿಷೇರುಗಳನ್ನು ಮಾರಾಟ ಮಾಡುವ ಪ್ರಸ್ತಾಪವನ್ನು "ಮಾರಾಟದ ಕೊಡುಗೆ" ಎಂದು ಕರೆಯಲಾಗುವುದು.

ಜನ ಸ್ಪಂದನ ಕಾರ್ಯಕ್ರಮದಿಂದ ಮಕ್ಕಳಿಗೆ ಬಿಸಿಯೂಟ

ಶಿವಮೊಗ್ಗ: ಲಷ್ಕರ್ ಮೊಹಲ್ಲಾದ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಯು ಒಂದು ವರ್ಷದ ಹಿಂದೆ ಸೋಮಿನಕೊಪ್ಪದ ಸ್ವಂತ ಕಟ್ಟಡಕ್ಕೆ ಸ್ಥಳಾಂತರಗೊಂಡು ಕಾರ್ಯ ನಿರ್ವಹಿಸುತ್ತಿದ್ದು ಅಲ್ಲಿಯ ಮಕ್ಕಳಿಗೆ ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆ ಇರುವುದಿಲ್ಲ.

ಈ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡುವಂತೆ ಜೂ. 28 ರಂದು ನೆಡೆದ ಜನ ಸ್ಪಂದನ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಪೋಷಕರು ಮನವಿ ಮಾಡಿರುತ್ತಾರೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪನವರು ಜಿಲ್ಲಾಧಿಕಾರಿ ಮತ್ತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿ, ಮೌಲಾನಾ ಆಜಾದ್ ಮಾದರಿ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಕಲ್ಪಿಸುವಂತೆ ಸೂಚಿಸಿರುತ್ತಾರೆ.

ಅದರಂತೆ ಜೂ.29 ರಿಂದ ಹತ್ತಿರದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆಯಿಂದ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ತುಂಗಾ ಮೇಲ್ದಂಡೆ ಮುಖ್ಯ ಕಾಲುವೆಯಲ್ಲಿ ನೀರು ಹರಿಸುವಿಕೆ : ಎಚ್ಚರಿಕೆಯಿಂದರಿಲು ಸೂಚನೆ

ಶಿವಮೊಗ್ಗ: ತುಂಗಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆಯಲ್ಲಿ 2024-25ನೇ ಸಾಲಿನ ಮುಂಗಾರು ಹಂಗಾಮಿಗೆ ದಿ: 03-07-2024 ರಿಂದ 10-11-2024 ರವರೆಗೆ ಜಲಾಶಯದಲ್ಲಿ ನೀರಿನ ಲಭ್ಯತೆ ಅನುಸಾರ ನೀರು ಹ-ರಿಸಲಾಗುವುದು.

ಆದ್ದರಿಂದ ತುಂಗಾ ಮೇಲ್ದಂಡೆ ಯೋಜನೆಯ ಮುಖ್ಯ ನಾಲೆ ಹಾಗೂ ಉಪನಾಲೆಗಳಲ್ಲಿ ಅಚ್ಚುಕಟ್ಟು ರೈತರು ಹಾಗೂ ಸಾರ್ವಜನಿಕರ, ಜನ, ಜಾನುವಾರುಗಳೊಂದಿಗೆ ಯಾವುದೇ ಚಟುವಟಿಎಕಗಳನ್ನು ಮಾಡದೇ ಮುನ್ನೆಚ್ಚರಿಕೆಯಿಂದಿರಬೇಕೆಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ತುಂಗಾ ಮೇಲ್ದಂಡೆ ಯೋಜನೆ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

ವೀರಶೈವ ಲಿಂಗಾಯತ ಮಹಾಸಭೆಯಲ್ಲಿ ವಧುವರ ಸಮ್ಮೇಳನ

ಬೆಳಗಾವಿ: ಬ್ರಹತ್ ವೀರಶೈವ ಲಿಂಗಾಯತ ವಿಚ್ಛೇದಿತ, ವಿಧವೆ ವಿಧುರ ವಿಳಂಬ ವಧು ವರರ ಸಮಾವೇಶ ಬೆಳಗಾವಿಯ ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಬೆಳಗಾವಿ ಜಿಲ್ಲಾ ಘಟಕದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಮತ್ತು ಕೆ. ಎಲ್.ಇ ಸಂಸ್ಥೆಯ ಪ್ರಾಯೋಜಕತ್ವದಲ್ಲಿ ಸಂಸ್ಥಾಪಿಸಲ್ಪಟ್ಟ ವೀರಶೈವ ಲಿಂಗಾಯತ ವಧುವರ ಅನ್ವೇಷಣ ಕೇಂದ್ರದ ಆಶ್ರಯದಲ್ಲಿ ವಿಚ್ಛೇದಿತ, ವಿಧುರ, ವಿಧವೆ ವಿಳಂಬಿತ ವಧು ವರ ಪಾಲಕರ ಬೃಹತ್ ಸಮಾವೇಶ ಜರುಗಿತು.

ಸಮಾವೇಶದ ಉದ್ಘಾಟನೆ ನೆರವೇ-ರಿಸಿದ ಅಖಿಲ ಭಾರತ ವೀರಶೈವ ಮಹಾಸಭೆಯ ಕ್ರಿಯಾಶೀಲ ಅಧ್ಯಕ್ಷೆ ರತ್ನಪ್ರಭಾ ಬೆಲ್ಲದ ಅವರು ಒಂದಿಲ್ಲೊಂದು ಕಾಯಕದಲ್ಲಿ

ನಿರತರಾಗಿರುವ ಲಿಂಗಾಯತ ಸಮುದಾಯದ ಒಳ ಪಂಗಡಗಳ ವಧು ವರರಿಗೆ, ಪಾಲಕರಿಗೆ ಬೇರೆ ಬೇರೆ ಊರು ಕೇರಿಗಳಿಗೆ ಹೋಗಿ ವಧು ವರರನ್ನು ಭೇಟಿ ಮಾಡುವದು ಕಷ್ಟವಾಗುತ್ತಿರುವದ-ರಿಂದ ಒಂದೇ ವೇದಿಕೆಯ ಮೇಲೆ ಹಲವಾರು ವಧು ವರರನ್ನು ನೋಡಿ ವೈವಾಹಿಕ ಸಂಬಂಧಗಳು ಕುದುರುವುದಕ್ಕೆ ಅವಕಾಶ

ಕಳೆದ 26 ವರ್ಷಗಳಲ್ಲಿ ನಮ್ಮನ್ನು ಯಾರು ಪ್ರಶ್ನಿಸಿಲ್ಲ: ಸಚಿವ ಸತೀಶ್ ಜಾರಕಿಹೊಳಿ

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಕುರಿತು ಪಕ್ಷದಲ್ಲಿ ಚರ್ಚೆ ನಡೆದಿಲ್ಲ- ಸ್ವಾಮೀಜಿಗಳು ಸಮಾಜದ, ರಾಜಕೀಯ ಬಗ್ಗೆ ಮಾತನಾಡುವುದು ತಪ್ಪಲ್ಲವೆಂದ ಸಚಿವರು

ಬೆಳಗಾವಿ: ಕಳೆದ 26 ವರ್ಷಗಳಿಂದ ನಮ್ಮನ್ನು ನೀವು ಯಾಕೆ ಮತಕ್ಷೇತ್ರಕ್ಕೆ ಬಂದಿಲ್ಲ, ಭೇಟಿಯಾಗಿಲ್ಲವೆಂದು ಯಾರು ಕೂಡ ಪ್ರಶ್ನಿಸಿಲ್ಲ. ಏಕೆಂದರೆ ಬೆಳಗ್ಗೆಯಿಂದ ಸಂಜೆವರೆಗೆ ನಾವು ಜನರೊಂದಿಗೆ ಸಮಯ ಕಳೆಯುತ್ತೇವೆ, ಅವರ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪುತ್ರಿ ಪ್ರಿಯಂಕಾ ಜಾರಕಿಹೊಳಿ ಚಿಕ್ಕೋಡಿ ಸಂಸದರಾಗಿ ಆಯ್ಕೆಯಾದ ಬಳಿಕ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಜನತೆಗೆ ಭೇಟಿಯಾಗುತ್ತಿದ್ದೇವೆ. ಅಲ್ಲಿನ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಳ್ಳುತ್ತಿದ್ದೇವೆ. ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಮಾಡಲು ಸಾಕಷ್ಟು ಕೆಲಸಗಳಿವೆ. ಅವುಗಳನ್ನು ಹಂತ, ಹಂತವಾಗಿ ಮಾಡಲಾಗುವುದು ಎಂದು ತಿಳಿಸಿದರು.

ರಾಯಬಾಗ, ಕುಡಚಿ ಮತಕ್ಷೇತ್ರದ ಜನರ ಸಮಸ್ಯೆಗಳನ್ನು ಆಲಿಸಿದ್ದು, ಚಿಕ್ಕೋಡಿ, ನಿಪ್ಪಾಣಿ, ಅಥಣಿ, ಕಾಗವಾಡ ಕ್ಷೇತ್ರದ ಸಮಸ್ಯೆಗಳಿಗೂ ಗಮನ ಹರಿಸಬೇಕಾಗಿದೆ. ಚಿಕ್ಕೋಡಿ ಲೋಕಸಭೆ ಕ್ಷೇತ್ರ ನಮಗೆನೂ ಹೊಸದಲ್ಲ. ಆದರೆ ಜನರ ಸಮಸ್ಯೆಗಳನ್ನು ಖುದ್ದಾಗಿ ತಿಳಿದುಕೊಳ್ಳಲು ಪ್ರವಾಸ ಮಾಡುತ್ತಿದ್ದೇವೆ ಎಂದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಿದರೆ ನಿಭಾಯಿಸುತ್ತಿರಾ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಚುನಾವಣೆ ಸಮೀಪ ಬಂದಾಗ ನೋಡೋಣ. ಬಹಳಷ್ಟು ಜನ ಕೆಪಿಸಿಸಿ ಅಧ್ಯಕ್ಷರಾಗಲು ಸಮರ್ಥರಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಬೇಕೆಂದು ಬಹಳಷ್ಟು ಜನ ಆಕಾಂಕ್ಷಿಗಳು ಇದ್ದಾರೆ. ಆದರೆ ಕೆಪಿಸಿಸಿ ಅಧ್ಯಕ್ಷರನ್ನು ಬದಲಾವಣೆ ಮಾಡುವುದು ಬಿಡುವುದು ಹೈಕಮಾಂಡ್ ಗೆ ಬಿಟ್ಟ ವಿಚಾರ. ಈ ಬಗ್ಗೆ ಹೈಕಮಾಂಡ್ ನಿರ್ಧಾರವೇ ಅಂತಿಮ ನಿರ್ಧಾರ. ಪಕ್ಷದಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಕುರಿತು ಚರ್ಚೆ ನಡೆದಿಲ್ಲ ಎಂದು ಸ್ಪಷ್ಟ ಪಡಿಸಿದರು.

ಕಳೆದ ವಾರ ದೆಹಲಿಗೆ ಹೋಗಿ ಐಎಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ್ದು ನಿಜ. ಅಧ್ಯಕ್ಷರ ಭೇಟಿ

ಮಾಡುವುದು ಸಹಜ. ಇದಕ್ಕೆ ಬೇರೆ ಅರ್ಥ ಕಲ್ಪಿಸುವುದು ಬೇಡ. ಇನ್ನು ಅಧ್ಯಕ್ಷರ ಭೇಟಿ ನಂತರ ಕೇಂದ್ರ ಸಚಿವ ನಿತಿನ್ ಗಟ್ಕರಿ ಸೇರಿದಂತೆ ಅನೇಕರನ್ನು ಭೇಟಿಯಾಗಿ ರಾಜ್ಯಕ್ಕೆ ಸಂಬಂಧಿಸಿದ ಪ್ರಮುಖ ಅಭಿವೃದ್ಧಿ ಕೆಲಸಗಳ ಬಗ್ಗೆ ಚರ್ಚಿಸಿದ್ದಾಗಿ ಇದೇ ವೇಳೆ ಮಾಹಿತಿ ನೀಡಿದರು.

ಸಿಎಂ ಆಗಬೇಕೆಂದರೆ ಸಮಯ ಕೂಡಿ ಬರಬೇಕು. ಸಮಯ ಕೂಡಿ ಬರಬೇಕಾದರೆ ಕಾಯಬೇಕು. ರಾಜಕೀಯದಲ್ಲಿ ತಾಳ್ಮೆ ಇದ್ದರೆ ಮಾತ್ರ ಬೆಳೆಯಲು ಸಾಧ್ಯವಿದೆ. ಯಾವುದೇ ಆಯ್ಕೆ ಇರಲಿ, ಇಲ್ಲದಿರಲಿ ಪಕ್ಷದಲ್ಲಿ ಚರ್ಚೆಯಾದಾಗ ಮಾತ್ರ ರಾಜಕೀಯವಾಗಿ ಬೆಳವಣಿಗೆಗಳು ಆಗುತ್ತವೆ. ಇನ್ನು ಯಾವುದೇ ಸಮಾಜದ ಸ್ವಾಮೀಜಿಗಳಾಗಲಿ ಅವರವರ ಸಮಾಜದ ಬಗ್ಗೆ, ರಾಜಕೀಯವಾಗಿ ಮಾತನಾಡುವುದು ತಪ್ಪಲ್ಲ ಎಂದ ಸಚಿವರು, ನಾವೇ ಡಿಸಿಎಂ ಆಗಬೇಕೆಂದು ಎಲ್ಲಿಯೂ ಹೇಳಿಲ್ಲ. ಬೇರೆಯವರು ಮಾತನಾಡಿದರೆ ನಾವೆನೂ ಮಾಡಲಿಕ್ಕೆ ಆಗಲ್ಲವೆಂದರು.

ಬೆಳಗಾವಿ ಜಿಲ್ಲೆ ದೊಡ್ಡ ಜಿಲ್ಲೆಯಾಗಿದ್ದು ಹೆಚ್ಚಿನ ಸ್ಥಾನ ನಿಗಮ ಮಂಡಳಿಗಳಲ್ಲಿ ಜಿಲ್ಲೆಗೆ ಸಿಗಬೇಕೆಂದು ನನ್ನ ಆಗ್ರಹವೂ ಇದೆ. ಈ ಕುರಿತು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಗಮನಕ್ಕೆ ತಂದಿದ್ದೇನೆ ಎಂದು ತಿಳಿಸಿದ ಅವರು, ಕಣಬರ್ಗಿ ಲೇಔಟ್ ಅಭಿವೃದ್ಧಿಗಾಗಿ ಕ್ಯಾಬಿನೆಟ್ ನಲ್ಲಿ ಅನುಮೋದನೆ ನೀಡಿದ್ದು, ಟೆಂಡರ್ ಕರೆದು ಶೀಘ್ರವೇ ಕಾಮಗಾರಿಗೆ ಚಾಲನೆ ನೀಡಲಾಗುವುದು. ಇನ್ನು ಬೆಳಗಾವಿ ನಗರದ ನೂತನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅವಶ್ಯವಿರುವ ಸಿಬ್ಬಂದಿಗಳ ನೇಮಕ ಹಾಗೂ ವೈದ್ಯಕೀಯ ಉಪಕರಣಗಳನ್ನು ಒದಗಿಸುವುದಕ್ಕೆ ಸಂಬಂಧಿಸಿದಂತೆ ಈಚೆಗೆ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರೊಂದಿಗೆ ಚರ್ಚಿಸಿದ್ದು, ಶೀಘ್ರದಲ್ಲಿಯೇ ಆಸ್ಪತ್ರೆ ಆರಂಭಿಸಲಾಗುವುದು ಎಂದರು.

ಆಂತರಿಕ ಸಮೀಕ್ಷೆ ಮಾಡುತ್ತಿರುವುದು ನಿಜ: ಬೆಳಗಾವಿ, ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಸೋಲು, ಗೆಲುವು ಬಗ್ಗೆ ಆಂತರಿಕ ಸಮೀಕ್ಷೆ ಮಾಡುತ್ತಿರುವುದು ನಿಜ. ಈ ಸಮೀಕ್ಷೆ ನಡೆಸಲು ಟೀಮ್ ರಚಿಸಲಾಗಿದ್ದು, ಈಗಾಗಲೇ ಪ್ರತಿ ಬೂತ್ ಮಟ್ಟದಲ್ಲಿ ಸಮೀಕ್ಷೆ ನಡೆಯುತ್ತಿದೆ. ಮುಂದಿನ ಬಾರಿ 2 ಲಕ್ಷ ಮತಗಳ ಅಂತರದಿಂದ ಗೆಲ್ಲುತ್ತೇವೆಂದು ಈಗಾಗಲೇ ಘೋಷಿಸಿದ್ದು, ಅದಕ್ಕಾಗಿ ಎಲ್ಲಿ ನಮಗೆ ಕಡಿಮೆ ಮತಗಳು ಬಂದಿವೆ, ನಮ್ಮಿಂದ ಎನು ತಪ್ಪಾಗಿದೆ ಎಂಬ ಎಲ್ಲಾ ಅಂಶಗಳನ್ನು ತಿಳಿಯಲಿಕ್ಕೆ ಸಮೀಕ್ಷೆ ನಡೆಸುತ್ತಿದ್ದೇವೆ ಎಂದು ಹೇಳಿದರು.

ಶಾಸಕರಾದ ರಾಜು ಕಾಗೆ, ಲಕ್ಷ್ಮಣ ಸವದಿ, ಮಹೇಂದ್ರ ತಮ್ಮಣ್ಣವರ್ ಅಥಣಿಯಲ್ಲಿ ಇಂದು ಸೇರಿದ್ದ ಬಗ್ಗೆ ಮಾತನಾಡಿ, ಅವರೆಲ್ಲರೂ ಒಂದೆಡೆ ಸೇರಿರಬಹುದು. ಅವರೆಲ್ಲರೂ ಗೆಳೆಯರು, ಅದಕ್ಕೆ ಸೇರಿದ್ದಾರೆ ಅಷ್ಟೇ ಎಂದು ತಿಳಿಸಿದ ಸಚಿವ ಸತೀಶ್ ಜಾರಕಿಹೊಳಿ, ಕುಡಚಿ, ರಾಯಬಾಗ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಸಾಮಾನ್ಯ ಕ್ಷೇತ್ರವಾಗಬಹುದು. ರಾಯಬಾಗ, ಕುಡಚಿ ನಡುವೆ ಎರಡು ಕ್ಷೇತ್ರಕ್ಕೆ ಸಮೀಪವಾಗಲಿ ಎಂಬ ದೃಷ್ಟಿಯಿಂದ ಈಗಾಗಲೇ ಅಳಗವಾಡಿಯಲ್ಲಿ ಮನೆ ನಿರ್ಮಾಣ ಮಾಡುತ್ತಿದ್ದೇವೆ. ಒಂದು ವರ್ಷದಲ್ಲಿ ಮನೆ ಸಂಪೂರ್ಣ ನಿರ್ಮಾಣವಾಗಲಿದೆ. ಮನೆ ನಿರ್ಮಾಣವಾದ ಬಳಿಕ ಆ ಭಾಗದ ಜನರನ್ನು ಅಲ್ಲಿಯೇ ಭೇಟಿಯಾಗಲು ಅನುಕೂಲವಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು) ಸೇಠ್, ಬೆಳಗಾವಿ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ ಸೇರಿದಂತೆ ಇತರರ ಇದ್ದರು.

ನಾಪತ್ತೆಯಾಗಿದ್ದ ಪೊಲೀಸ್ ಕಾನ್ಸ್ಟೇಬಲ್ ಶವವಾಗಿ ಪತ್ತೆ

ಬೆಂಗಳೂರು: ನಗರದ ಜ್ಞಾನಭಾರತಿ ವಿಶ್ವವಿದ್ಯಾಲಯದ ಆವರಣದ ಬಾವಿಯಲ್ಲಿ ಪೊಲೀಸ್ ಕಾನ್ಸ್ಟೇಬಲ್ ಶವ ಪತ್ತೆ ಆಗಿರುವಂತಹ ಘಟನೆ ನಡೆದಿದೆ.

ಮಡಿವಾಳ ಠಾಣೆಯ ಕಾನ್ಸ್ಟೇಬಲ್ ಶಿವರಾಜ್(29) ಮೃತ ವ್ಯಕ್ತಿ. ಕೌಟುಂಬಿಕ ಕಲಹದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತಪಡಿಸಲಾಗಿದೆ. ಮೃತ ಕಾನ್ಸ್ಟೇಬಲ್ ಶಿವರಾಜ್ ಜೂ.26ರಂದು ಮನೆಯಿಂದ ನಾಪತ್ತೆಯಾಗಿದ್ದರು. ಸದ್ಯ ಮರಣೋತ್ತರ ಪರೀಕ್ಷೆಗೆ ವಿಕ್ಟೋರಿಯಾ ಆಸ್ಪತ್ರೆಗೆ ಮೃತದೇಹವನ್ನು ರವಾನೆ ಮಾಡಲಾಗಿದೆ.

3 ತಿಂಗಳ ಹಿಂದೆ ದಾವಣಗೆರೆ ಮೂಲದ ವಾಣಿ ಎಂಬುವವರನ್ನು ಶಿವರಾಜ್ ವಿವಾಹವಾಗಿದ್ದರು. ಮದುವೆ ನಂತರ ಕೌಟುಂಬಿಕ ಕಲಹ ಹಿನ್ನೆಲೆ ದಂಪತಿ ದೂರವಾಗಿದ್ದರು. ಶಿವರಾಜ್ ಮತ್ತು ಕುಟುಂಬದ ವಿರುದ್ಧ ದಾವಣಗೆರೆಯಲ್ಲಿ ವರದಕ್ಷಿಣೆ ಕಿರುಕುಳ ಬಗ್ಗೆ ವಾಣಿ ದೂರು ನೀಡಿದ್ದರು. ಈ ಕುರಿತಾಗಿ ದಾವಣಗೆರೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ದೂರು ನೀಡಿದ ಬಳಿಕ ಮತ್ತೆ ಶಿವರಾಜ್ಗೆ ವಾಣಿ ಬೆದರಿಕೆ ಹಾಕಿದ್ದರು. ಪತ್ನಿ ವಾಣಿ ಕಿರುಕುಳದಿಂದ ಶಿವರಾಜ್ ಬೇಸತ್ತಿದ್ದನೆಂದು, ಕರ್ತವ್ಯಕ್ಕೆ ತೆರಳಿದ್ದ ಪಿಸಿ ಶಿವರಾಜ್ ನಾಪತ್ತೆ ಎಂದು ಶಿವರಾಜ್ ಸಂಬಂಧಿಕರಿಂದ ಸುಬ್ರಹ್ಮಣ್ಯಪುರ ಠಾಣೆಗೆ ದೂರು ನೀಡಲಾಗಿತ್ತು. ಎಫ್ಐಆರ್ ದಾಖಲಿಸಿಕೊಂಡು ಸುಬ್ರಹ್ಮಣ್ಯಪುರ ಠಾಣೆ ಪೊಲೀಸರಿಂದ ತನಿಖೆ ಮಾಡಲಾಗುತ್ತಿದೆ.

ಪಿಎಸ್ಐ ವೆಂಕಣ್ಣನವರ ಸೇವಾವಧಿ ಮಾದರಿಯಾಗಿದೆ

ಕೆಂಭಾವಿ: ಸುದೀರ್ಘ 35 ವರ್ಷಗಳ ವರೆಗೆ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸಿ ಇಂದು ವಿಶ್ರಾಂತ ಜೀವನಕ್ಕೆ ಕಾಲಿಡುತ್ತಿರುವ ಅಪರಾಧ ವಿಭಾಗದ ಪಿಎಸ್ಐ ವೆಂಕಣ್ಣ ಶಾಹಪೂರಕರ್ ರವರ ಸೇವಾವಧಿಯ ಹಾದಿ ನಿಜಕ್ಕೂ ಮಾದರಿಯಾಗಿದೆ ಎಂದು ಸಿಪಿಐ ಸಚೀನ್ ಚಲುವಾದಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ಹಮ್ಮಿಕೊಂಡ, ಕೆಂಭಾವಿ ಠಾಣೆಯ ಅಪರಾಧ ವಿಭಾಗದ ಪಿಎಸ್ಐ ವೆಂಕಣ್ಣ ಶಹಾಪೂರಕರ್ ರವರ ಸೇವಾ ನಿವೃತ್ತಿ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪಿಎಸ್ಐ ವೆಂಕಣ್ಣನವರು, ಇಲಾಖೆಯ ವಿವಿಧ ಸ್ತರಗಳಲ್ಲಿ ತಮ್ಮ ಪ್ರಾಮಾಣಿಕ ಸೇವೆಯಿಂದ

ಗುರುತಿಸಿ ಕೊಂಡವರಾಗಿದ್ದು, ಇಲಾಖೆಯಲ್ಲಿನ ಅವರ ಸೇವೆ ಮೌಲ್ಯಯುತವಾದದ್ದು, ಶಿಸ್ತು ಮತ್ತು ಪ್ರಾಮಾಣಿಕತೆಗೆ ಹೆಸರಾದವರಾಗಿದ್ದಾರೆ. ಅವರ ಮಾರ್ಗದರ್ಶನ ನಮ್ಮ ಸಿಬ್ಬಂದಿಗೆ ಯಾವತ್ತೂ ಹಿತಕರವಾದದ್ದು, ಪೊಲೀಸ್ ಇಲಾಖೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ಇಂದು ನಿವೃತ್ತಿಯಾಗುತ್ತಿರುವ ಅವರ ವಿಶ್ರಾಂತದ ಸಮಯ ಅತ್ಯಂತ ಸುಖಕರವಾಗಿರಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಸೇವಾ ನಿವೃತ್ತಿ ಹೊಂದಿದ ಪಿಎಸ್ಐ ವೆಂಕಣ್ಣ ಶಹಾಪೂರಕರ್ ದಂಪತಿಗಳಿಗೆ ಠಾಣೆಯ ವತಿಯಿಂದ ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು, ಸನ್ಮಾನ ಸ್ವೀಕರಿಸಿದ ಪಿಎಸ್ಐ ವೆಂಕಣ್ಣನವರು ಮಾತನಾಡಿ, ನನ್ನ ಸೇವಾವಧಿಯಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳೂ ಸೇರಿದಂತೆ ಎಲ್ಲ ಸಿಂಬಂದಿ ನನ್ನ ಕರ್ತವ್ಯ ನಿರ್ವಹಣೆಗೆ ತುಂಬಾ ಸಹಕಾರ ನೀಡಿ ವೃತ್ತಿಜೀವನದ ಯಶಸ್ಸಿಗೆ ಕಾರಣರಾಗಿದ್ದಾರೆ. ತಮ್ಮೆಲ್ಲರ ಸಹಕಾರಕ್ಕೆ ಕೃತಜ್ಞತೆ ತಿಳಿಸುವುದಾಗಿ ಹೇಳಿದರು. ಕೆಂಭಾವಿ ಠಾಣೆ ಪಿಎಸ್ಐ ರಾಜಶೇಖರ ರಾಠೋಡ್ ಸೇರಿದಂತೆ ತಾಲೂಕಿನ ವಿವಿಧ ಠಾಣೆಯ ಪಿಎಸ್ಐ ರವರಾದ, ಭಾಗಣ್ಣ, ಚಂದ್ರಕಾಂತ, ಹಣಮಂತ್ರಾಯ, ಸಿದ್ದಣ್ಣ, ಕೃಷ್ಣ ಸುಬೆದಾರ್, ಅಯ್ಯುಬಖಾನ್ ಹಾಗೂ ಸಿಬ್ಬಂದಿ ಪರವಾಗಿ ಹೆಡ್ ಕಾನ್ಸಟೇಬಲ್ ಶಿವರಾಜ್ ಖಾನಗೌಡರ್ ಇತರರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಪಟ್ಟಣದ ಪ್ರಮುಖರು, ವಲಯದ ವಿವಿಧ ಗ್ರಾಮಗಳ ಮುಖಂಡರು, ವಿವಿಧ ಸಂಘಟನೆಯ ಪದಾಧಿಕಾರಿಗಳು, ಇಲಾಖೆಯ ಸಿಬ್ಬಂದಿ ಗೌರವಿಸಿ ಶುಭಕೋರಿದರು.

ನಂತರ ಪಿಎಸ್ಐ ಶಾಹಪೂರಕರ್ ರವರಿಗೆ ಕೆಂಭಾವಿ ಠಾಣೆಯವತಿಯಿಂದ ಪುಷ್ಪವೃಷ್ಟಿಯ ಮೂಲಕ ಅದ್ದೂರಿಯಾಗಿ ಬೀಳ್ಕೊಡಲಾಯಿತು.

ಬೆಳಗಾವಿ: ಅನಾಥ ಪ್ರಾಣಿಗಳ 'ವೈದ್ಯ'ನಾಥ

ಅಪಘಾತಕ್ಕೀಡಾಗಿ ರಸ್ತೆಯಲ್ಲಿ ಮೃತಪಡುವ ಪ್ರಾಣಿಗಳ ಅಂತ್ಯಸಂಸ್ಕಾರ ನಡೆಸುವ ಡಾ.ಮಹಾಂತೇಶ

ಬೆಳಗಾವಿ: 'ಬೈಲಹೊಂಗಲದಿಂದ ಮಹಾಲಿಂಗಪುರಕ್ಕೆ ಕಾರಿನಲ್ಲಿ ಹೊರಟಿದ್ದೆ. ನಾಯಿ ಅಪಘಾತಕ್ಕೀಡಾಗಿ ರಸ್ತೆಯಲ್ಲೇ ಮೃತಪಟ್ಟಿತ್ತು. ಸ್ವಲ್ಪ ದೂರದಲ್ಲೇ ರಸ್ತೆಬದಿ ಮಗುವೊಂದು ಶೌಚಕ್ಕೆ ಕುಳಿತಿತ್ತು. ಈ ಮಾರ್ಗದಲ್ಲಿ ವೇಗವಾಗಿ ಬಂದ ವಾಹನವೊಂದು ನಾಯಿಯನ್ನು ತಪ್ಪಿಸಿ ಮುಂದೆ ಸಾಗಿತು. ನಿಯಂತ್ರಣ ಕಳೆದುಕೊಂಡು ಮಗುವಿಗೆ ಡಿಕ್ಕಿ ಹೊಡೆಯುವುದು ಸ್ವಲ್ಪದರಲ್ಲೇ ತಪ್ಪಿತು. ಆಗ ರಸ್ತೆಯಲ್ಲಿ ಅಪಘಾತಕ್ಕೀಡಾದ ಪ್ರಾಣೀ-ಪಕ್ಷಿ ತಪ್ಪಿಸಲು ಹೋಗಿ ಎಷ್ಟು ಅವಘಡ ಸಂಭವಿಸಬಹುದೆಂಬ ಆಲೋಚನೆ ಬಂತು. ಅಂದಿನಿಂದ ನಾನು ಹೋಗುವ ರಸ್ತೆಯಲ್ಲಿ ಯಾವುದೇ ಪ್ರಾಣೀ-ಪಕ್ಷಿ ಸತ್ತುಬಿದ್ದಿದ್ದರೂ ತೆರವುಗೊಳಿಸುತ್ತೇನೆ. ಸಮಯವಿದ್ದಾಗ ಅಂತ್ಯಕ್ರಿಯೆಯನ್ನೂ ಮಾಡುತ್ತೇನೆ'

ಇದು ಶಹಾಪುರದ ಕೆಎಲ್ಇ ಸಂಸ್ಥೆಯ ಬಿ.ಎಂ.ಕಂಕಣವಾಡಿ ಆಯುರ್ವೇದ ಮಹಾವಿದ್ಯಾಲಯದ ಶರೀರ ರಚನಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಮಹಾಂತೇಶ ರಾಮಣ್ಣವರ ಅವರ ನುಡಿ.

ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನಕ್ಕಾಗಿ 2008ರಲ್ಲಿ ಸ್ವತಃ ತಮ್ಮ ತಂದೆಯ ಮೃತ ಶರೀರವನ್ನೇ ಛೇದಿಸಿದ್ದ ಅವರು, ಈಗ ದೇಹದಾನದ ಮಹತ್ವದ ಬಗ್ಗೆ ರಾಜ್ಯದಾದ್ಯಂತ ಜಾಗೃತಿ ಮೂಡಿಸುತ್ತಿದ್ದಾರೆ. ಈ ಮಧ್ಯೆ, ತಾವು ಸಂಚರಿಸುವ ಮಾರ್ಗದಲ್ಲಿ ಅಪಘಾತಕ್ಕೀಡಾಗಿ ಸಾವನ್ನಪ್ಪುವ ಪ್ರಾಣಿ-ಪಕ್ಷಿಗಳನ್ನು ಅಲ್ಲಿಂದ ತೆಗೆದು, ಸಂಭವನೀಯ ಅಪಘಾತ ತಪ್ಪಿಸುತ್ತಿದ್ದಾರೆ.

'ನನ್ನ ಕಾರಿನಲ್ಲಿ ಕೈಗವಸು, ಫೇಸ್‌ಮಾಸ್ಕ್, ಆ್ಯಂಟಿಸೆಪ್ಟಿಕ್ ಲೋಷನ್ ಸದಾ ಇರುತ್ತವೆ. ನಾನು ತೆರಳುವ ರಸ್ತೆಯಲ್ಲಿ ನಾಯಿ, ಬೆಕ್ಕು, ಕತ್ತೆಕಿರುಬ, ನರಿ, ಮೊಲ, ಹಾವು, ಕಾಗೆ ಮೃತಪಟ್ಟಿದ್ದರೆ, ವಾಹನ ನಿಲ್ಲಿಸಿ ಅವುಗಳನ್ನು ದೂರಕ್ಕೆ ಒಯ್ದಿಡುತ್ತೇನೆ. ಬಿಡುವಿದ್ದರೆ ನಾನೇ ತಗ್ಗು ತೋಡಿಸಿ, ಅಂತ್ಯಕ್ರಿಯೆ ಮಾಡುತ್ತೇನೆ. ಇಲ್ಲದಿದ್ದರೆ ಸ್ಥಳೀಯರು, ರೈತರಿಗೆ ಅಂತ್ಯಕ್ರಿಯೆ ಮಾಡುವಂತೆ ತಿಳಿಸಿ ಹೋಗುತ್ತೇನೆ' ಎಂದು ಮಹಾಂತೇಶ ಹೇಳಿದರು.

ಬೈಲಹೊಂಗಲದಲ್ಲಿ ಇದ್ದಾರೆ 'ಹತ್ತು ರೂಪಾಯಿ' ಡಾಕ್ಟ್ರು

ಬೈಲಹೊಂಗಲ: ಇದು ದುಬಾರಿ ಯುಗ. ಇಂದು ಬಹುತೇಕ ಖಾಸಗಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಶುಲ್ಕ ಜನರ ಕೈಸುಡುತ್ತಿದೆ. ಆದರೆ, ಪಟ್ಟಣದ ಇಂಚಲ ರಸ್ತೆಯಲ್ಲಿನ ಕ್ಲಿನಿಕ್‌ಗೆ ಕಾಲಿಟ್ಟರೆ ನಿಮಗೆ ಅಚ್ಚರಿಯಾಗುತ್ತದೆ. ಇಲ್ಲಿ ವೈದ್ಯ ಡಾ.ಎ. ಎನ್.ಬಾಳಿ ತಮ್ಮ ಬಳಿ ಚಿಕಿತ್ಸೆಗಾಗಿ ಬರುವ ರೋಗಿಗಳಿಂದ ಪಡೆಯುವುದು 10 ಮಾತ್ರ.

ಬೈಲಹೊಂಗಲದ ಸರ್ಕಾರಿ ಆಸ್ಪತ್ರೆಯಲ್ಲಿ ಮುಖ್ಯ ವೈದ್ಯಾಧಿಕಾರಿ, ಬೈಲಹೊಂಗಲ, ಬೆಳಗಾವಿ, ಚಿಕ್ಕೋಡಿಯಲ್ಲಿ ಸಹಾಯಕ ಜಿಲ್ಲಾ ಆರೋಗ್ಯ ಅಧಿಕಾರಿ ಮತ್ತು ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸೆಕರಾಗಿ ಸೇವೆ ಸಲ್ಲಿಸಿ, ಅವರು ನಿವೃತ್ತಿ ಹೊಂದಿದ್ದಾರೆ. 31 ವರ್ಷ ಸರ್ಕಾರಿ ಸೇವೆ ಸಲ್ಲಿಸಿದ ನಂತರ ಅವರು ಕೈಕಟ್ಟಿ ಕುಳಿತಿಲ್ಲ.

ಬದಲಿಗೆ, ಬಡ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಶ್ರಮಿಸುತ್ತಿದ್ದಾರೆ. 'ಹತ್ತು ರೂಪಾಯಿ ಡಾಕ್ಟ್ರು' ಎಂದೇ ಈ ಭಾಗದಲ್ಲಿ ಗುರುತಿಸಿಕೊಂಡಿದ್ದಾರೆ.

ಬಾಲಕಿಯ ಮೇಲೆ ಅತ್ಯಾಚಾರ ಕೆಸ್: ಆರೋಪಿ ಬಂಧನ



ಚಿಕ್ಕಬಳ್ಳಾಪುರ: ಮನೆ ಮುಂದೆ ಆಟವಾಡುತ್ತಿದ್ದ ಆರು ವರ್ಷದ ಬಾಲಕಿಯನ್ನು ಕರೆದೊಯ್ದ 17 ವರ್ಷದ ಬಾಲಕ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿನ ಕೆಂಚಾರ್ಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಬಾಲಕಿ ಒಬ್ಬಳೇ ಆಟವಾಡುತ್ತಿದ್ದನ್ನು ಗಮನಿಸಿದ 17ರ ಪೋರ ತಿಂಡಿ ಕೊಡಿಸುವುದಾಗಿ ಪುಸಲಾಯಿಸಿದ್ದಾನೆ. ತಿಂಡಿ ಆಸೆಗೆ ಆತನೊಂದಿಗೆ ಬಾಲಕಿ ಹೋಗಿದ್ದಾಳೆ. ಆದರೆ ಅಂಗಡಿ ಕರೆದುಕೊಂಡು ಹೋಗದೇ ಬಾಲಕಿಯನ್ನು ತನ್ನ ಮನೆಯೊಳಗೆ ಕರೆದೊಯ್ದು ಅತ

ಅರ್ಜಿ ಆಹ್ವಾನ

ಬೆಳಗಾವಿ: ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದ ಪಿಹೆಚ್‌ಡಿ ಪದವಿ ಪಡಿಯುತ್ತಿರುವ ಅಭ್ಯರ್ಥಿಗಳಿಗೆ ಜಿ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್‌ಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್‌ನ ವೆಬ್‌ಸೈಟ್ **http://sevasindhukarnataka.gov.in** ಮೂಲಕ ಆಗಸ್ಟ್ 31 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಛಿttp://dom.karnataka.gov.in ವೆಬ್‌ಸೈಟ್‌ನಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ಬೆಳಗಾವಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಅರ್ಹತೆಗಳು: ವಿದ್ಯಾರ್ಥಿಗಳು ಸರ್ಕಾರದಿಂದ ಶಾಸನಬದ್ಧ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶ ಪಡೆದಿರಬೇಕು. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಮುಸ್ಲಿಂ, ಕ್ರಿಶ್ಚಿಯನ್, ಜೈನ್,ಬೌದ್ಧ, ಸಿಖ್ ಹಾಗೂ ಪಾರ್ಸಿ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು. ಸರ್ಕಾರಿ-ಖಾಸಗಿ ಕಾರ್ಯ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಕುಟುಂಬದ ವಾರ್ಷಿಕ ಆದಾಯವು ರೂ 8.00 ಲಕ್ಷಗಳನ್ನು ಮೀರಬಾರದು. ವಿದ್ಯಾರ್ಥಿಯ ಗರಿಷ್ಠ ವಯೋಮಿತಿ 35 ವರ್ಷ ಮೀರಬಾರದು.

ಪ್ರೊತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಪ್ರಸಕ್ತ ಸಾಲಿಗೆ ಸರ್ಕಾರದಿಂದ ಶಾಸನಬದ್ಧ ಅನುಮತಿ ಪಡೆದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರವೇಶ ಪಡೆದಿರುವ ಆಯ್.ಆಯ್.ಟಿ. ಆಯ್.ಆಯ್.ಆಯ್.ಟಿ, ಆಯ್.ಆಯ್.ಎಸ್.ಇ.ಆರ್, ಎ.ಆಯ್.ಆಯ್.ಎಸ್.ಎಂ, ಎನ್.ಎಲ್.ಯು, ಆಯ್.ಎನ್.ಆಯ್ ಹಾಗೂ ಆಯ್.ಯು.ಎಸ್.ಎಲ್.ಎ. ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಕೋರ್ಸ್‌ನ ಪೂರ್ಣ ಅವಧಿಯಲ್ಲಿ ಒಂದು ಬಾರಿಗೆ ಪ್ರೋತ್ಸಾಹಧನವನ್ನು ನೀಡಲು ಅರ್ಹ ವಿಧ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ವಿಧ್ಯಾರ್ಥಿಗಳು ಅರ್ಜಿಗಳನ್ನು https://sevasindhu.karnataka.gov.in/sevasindhu/departmentservices ವೆಬ್‌ಸೈಟ್ ಮೂಲಕ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಸಲ್ಲಿಸಲು 31-08-2024 ಕೊನೆಯ ದಿನವಾಗಿರುತ್ತದೆ ಹೆಚ್ಚಿನ ಮಾಹಿತಿಗಾಗಿ http://dom.karnataka.gov.in ವೆಬ್‌ಸೈಟ್ ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಧಿಕಾರಿಗಳು, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಕಾನೂನು ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವಿದರರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕಾನೂನು ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗಕ್ಕೆ ಸೇರಿದ ಕಾನೂನು ಪದವಿವೀಧರರು ಜುಲೈ 25 ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಅರ್ಹತೆ: ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಹೊರತು ಪಡಿಸಿ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಬೆಳಗಾವಿ ಜಿಲ್ಲೆಯಲ್ಲಿ ಪ್ರಸ್ತುತ ಖಾಲಿ ಇರುವ ಒಟ್ಟು 14 ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು. ಬೆಳಗಾವಿ ಜಿಲ್ಲೆಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ತರಬೇತಿ ಅವಧಿಯು 4 ವರ್ಷಗಳಾಗಿದ್ದು, ಆಯ್ಕೆಯಾದ ಫಲಾನುಭವಿಗಳಿಗೆ ಪ್ರತಿ ಮಾಹೆ ಹಾಜರಾತಿ ಅನುಗುನವಾಗಿ 4000 ತರಬೇತಿ ಭತ್ಯೆ (ಸ್ಟೈಪಂಡ್) ಮಂಜೂರು ಮಾಡಲಾಗುವುದು.

ಅಭ್ಯರ್ಥಿಗಳು ಅರ್ಜಿಯ ಜೊತೆ ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ, ಪದವಿ ಹಾಗೂ ಕಾನೂನು ಪದವಿಗಳ ಅಂಕ ಪಟ್ಟಿಗಳನ್ನು ದೃಡೀಕರಿಸಿ, ವಕೀಲರಾಗಿ ಪ್ರ್ಯಾಕ್ಟೀಸ್ ಮಾಡುತ್ತಿರುವ ಬಗ್ಗೆ ಪ್ರಮಾಣ ಪತ್ರಗಳನ್ನು ಲಗತ್ತಿಸತಕ್ಕದ್ದು. ಪ್ರವರ್ಗ-1 ರ ಅಭ್ಯರ್ಥಿಗಳಿಗೆ 40 ವರ್ಷ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 38 ವರ್ಷ ಗರಿಷ್ಠ ವಯೋಮಿತಿಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಮೀರಿರಬಾರದು.

ಅಭ್ಯರ್ಥಿಯು ಬಾರ್‌ಕೌನ್ಸಿಲ್‌ನಲ್ಲಿ ತಮ್ಮ ಹೆಸರು ನೊಂದಣಿ ಮಾಡದ ಹೊರತು ಸ್ಟೈಫಂಡ್ ಪಾವತಿಸಲಾಗುವುದಿಲ್ಲ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಾಯ ಧನ: ಅರ್ಜಿ ಆಹ್ವಾನ

ಬೆಳಗಾವಿ: 2024-25 ನೇ ಸಾಲಿನಲ್ಲಿ ದೀನದಯಾಳ ಅಂತ್ಯೋದಯ **(DAY NULM)** ಅಡಿ ನಗರ ಸ್ವಯಂ ಉದ್ಯೋಗ ಕಾರ್ಯಕ್ರಮ, ಸ್ವ-ಸಹಾಯ ಗುಂಪುಗಳ ರಚನೆ, ಪ್ರದೇಶ ಮಟ್ಟದ ಒಕ್ಕೂಟ ರಚನೆ ಹಾಗೂ ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಚಿಕ್ಕೋಡಿ ಪುರಸಭೆ ವ್ಯಾಪ್ತಿಯಲ್ಲಿ ವಾಸಿಸುವ ಬಡತನ ರೇಖೆಗಿಂತ ಕೆಳಗಿರುವ ನಿರುದ್ಯೋಗಿ ಪುರುಷ ಹಾಗೂ ಮಹಿಳೆಯ-ರಿಂದ ಅರ್ಜಿ ಆಹ್ವಾನಿಸಲಾಗಿದೆ.

ನಗರ ಸ್ವಯಂ ಉದ್ಯೋಗ ಕಾರ್ಯಕ್ರಮ: ಕಿರು ಉದ್ದಿಮೆ ಕೈಗೊಳ್ಳಲು ರಾಷ್ಟ್ರೀಕೃತ ಬ್ಯಾಂಕಿನಿಂದ ರೂ.2 ಲಕ್ಷವರೆಗೆ ಸಾಲ ಪಡೆದು ಸ್ವಂತ ಉದ್ಯೋಗ ಕೈಗೊಳ್ಳಲು ಯೋಜನೆಯಡಿ ಶೇ.7% ರ ಮೇಲ್ಪಟ್ಟ ಬಡ್ಡಿ ಸಹಾಯ ಧನ ನೀಡಲಾಗುವುದು.

ಸ್ವ ಸಹಾಯ ಗುಂಪುಗಳ ರಚನೆ: ನಗರ ಪ್ರದೇಶದಲ್ಲಿ ವಾಸಿಸುತ್ತಿರುವ ಬಡತನ ರೇಖೆಗಿಂತ ಕೆಳಗಿರುವ 10 ರಿಂದ 20 ಜನ ಮಹಿಳೆಯರ ಗುಂಪು ರಚನೆ ಮಾಡುವುದು ಹಾಗೂ ನಿರಂತರ ಉಳಿತಾಯವನ್ನು ಮಾಡುವುದು ಗುಂಪು ರಚಿಸಿದ 3 ತಿಂಗಳ ನಂತರ ಉಳಿತಾಯ ಮಾಡುತ್ತಿರುವುದನ್ನು ಪರಿಶೀಲಿಸಿ ಸುತ್ತು ನಿಧಿಯನ್ನು ಈ ಯೋಜನೆಯಡಿ ನೀಡಲಾಗುವುದು.

ಪ್ರದೇಶ ಮಟ್ಟದ ಒಕ್ಕೂಟ ರಚನೆ: ಪುರಸಭೆ ವ್ಯಾಪ್ತಿಯಲ್ಲಿ ಡೇ-ನಲ್ಮ್ ಯೋಜನೆಯಡಿ ಈ ಹಿಂದೆ ರಚಿಸಿದ ನಿರಂತರ ಉಳಿತಾಯ ಗುಂಪುಗಳ ಸದಸ್ಯರಿಂದ ಒಕ್ಕೂಟವನ್ನು ರಚಿಸುವುದು ಮತ್ತು ಕನಿಷ್ಠ 10 ಗುಂಪುಗಳಿಗೆ ಒಂದು ಪ್ರದೇಶಮಟ್ಟದ ಒಕ್ಕೂಟವನ್ನು ರಚಿಸುವುದು ಹಾಗೂ ಈ ಯೋಜನೆಯಡಿ ನಿರಂತರ ಒಕ್ಕೂಟದ ಕಾರ್ಯಚಟುವಡಿಕೆಯನ್ನು ಪರಿಶೀಲಿಸಿ ಸುತ್ತು ನಿಧಿಯನ್ನು ನೀಡಲಾಗುವುದು ಹಾಗೂ ಗುಂಪು ಮತ್ತು ವೈಯಕ್ತಿಕ ಉದ್ಯೋಗಕ್ಕಾಗಿ ವಿವಿಧ ಯೋಜನೆಗಳಿಂದ ಸಾಲವನ್ನು ನೀಡಲಾಗುವುದು.

ಸ್ವ ಸಹಾಯ ಸಂಘಗಳಿಗೆ ಬ್ಯಾಂಕ ಕ್ರೆಡಿಟ್ ಲಿಂಕೇಜ: ಡೇ ನಲ್ಮ ಯೋಜನೆಯಡಿ ಸ್ವ ಸಹಾಯ ಗುಂಪು ರಚಣೆಯಾಗಿರಬೇಕು ನಿರಂತ ಉಳಿತಾಯ ಮಾಡಿರಬೇಕು ಹಾಗೂ ಆಂತರಿಕ ಸಾಲ ವ್ಯವಹಾರ ಮಾಡುತ್ತಿರಬೇಕು ಗುಂಪು ಚಟುವಟಿಕೆಗಳನ್ನು ಕೈಗೊಳ್ಳುತ್ತಿರಬೇಕು. ಆಸಕ್ತ ಅಭ್ಯರ್ಥಿಗಳು ಸೂಕ್ತ ದಾಖಲಗೊಂದಿಗೆ ಜುಲೈ 6 ರೊಳಗಾಗಿ ಕಚೇರಿಯ ಡೇ-ನಲ್ಮ್ ವಿಭಾಗಕ್ಕೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡೇ-ನಲ್ಮ ಪುರಸಭೆ ಚಿಕ್ಕೋಡಿ ಶಾಖೆಗೆ ಸಂಪರ್ಕಿಸಬಹುದು ಎಂದು ಚಿಕ್ಕೋಡಿ ಪುರಸಭೆ ಮುಖ್ಯಾಧಿಕಾ-ರಿಗಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಗ್ರ ಬೆಳಗಾವಿಯ ರಸ್ತೆ ಅಭಿವೃದಿಗಾಗಿ ಹೆದ್ದಾರಿ ಸಚಿವರಿಗೆ ಜಗದೀಶ ಶೆಟ್ಟರ ಮನವಿ

ಬೆಳಗಾವಿ: ಬೆಳಗಾವಿ ಲೋಕಸಭಾ ಸದಸ್ಯರಾದ ಜಗದೀಶ ಶೆಟ್ಟರ ಅವರು (ಜು.01) ರಂದು ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರನ್ನು ದೆಹಲಿ ಅವರ ಕಛೇರಿಯಲ್ಲಿ ಭೇಟಿ ಮಾಡಿ ಸಮಗ್ರ ಬೆಳಗಾವಿಯ ರಸ್ತೆ ಅಭಿವೃದ್ಧಿಗಳ ಕುರಿತು ಮನವಿ ಸಲ್ಲಿಸಿದರು.

ಬೆಳಗಾವಿ ತಾಲೂಕಿನ ಜಡಶಾಹಪೂರ- ಹೊನಗಾ ನಡುವೆ ನಿರ್ಮಾಣ ಹಂತದಲ್ಲರುವ ಬೈಪಾಸ ರಸ್ತೆ (ರಿಂಗ ರೋಡ) ನಿರ್ಮಾಣ-ಕ್ಕೆ ಅಗತ್ಯವೆನಿಸಿರುವ ಭೂಸ್ವಾಧೀನ ಕಾರ್ಯವನ್ನು ತ್ವರಿತವಾಗಿ ಕೈಗೆತ್ತಿಕೊಳ್ಳುವ ಕಾಮಗಾರಿಯನ್ನು ವೇಗವಾಗಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ಮನವಿಯಲ್ಲಿ ತಿಳಿಸಿದರು.

ಬೆಳಗಾವಿ (ಶಗಣಮಟ್ಟಿ)-ಹುನಗುಂದ- ರಾಯಚೂರ ನಡುವೆಯೂ ನಿರ್ಮಾಣ ಗೊಳ್ಳುತ್ತಿರುವ ರಸ್ತೆಯ ನಿರ್ಮಾಣಕ್ಕೆ ಅಗತ್ಯವೆನಿಸಿರುವ ಭೂಸ್ವಾಧೀನ ಕಾರ್ಯವನ್ನು ತ್ವರಿತವಾಗಿ ಕೈಗೆತ್ತಿಕೊಳ್ಳುವ ವ ಕಾಮಗಾರಿಯನ್ನು ತ್ವ-ರಿತವಾಗಿ ಪೂರ್ಣಗೊಳಿಸುವಂತೆ ಹಾಗೂ ಬೆಳಗಾವಿ ನಗರಕ್ಕೆ ಹೊಂದಿ ಕೊಂಡು ರಾಷ್ಟ್ರೀಯ ಹೆದ್ದಾರಿ -4 ಯಿಂದ ಸೇರುವ ಅಪ್ರೋಚ ರಸ್ತೆ ಅಶೋಕ ವೃತ ಮಾರ್ಗವಾಗಿ ಕಿತ್ತೂರ ರಾಣಿ ಚನ್ನಮ್ಮ ವೃತ್ತದವರಗೆ "ಪ್ರೈಓವರ್ ನಿರ್ಮಾಣ ಮತ್ತು ಈ ಕುರಿತು ಕರ್ನಾಟಕ ರಾಜ್ಯ ಸರಕಾರ ಕೇಂದ್ರ ಸರಕಾರಕ್ಕೆ ಸಲ್ಲಿಸಿದ ರೂ. 600 ಕೋಟಿ ಪ್ರಸ್ತಾವನೆಗೆ ಅನುಮೋಧನೆ ನೀಡುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಕೇಂದ್ರ ರಸ್ತೆ ಸುಧರಣೆ ನಿದಿ"ಯೋಜನೆಯಡಿ ಗೋಕಾಕ ಫಾಲ್ಸ ಹತ್ತಿರ ಕೇಬಲ್ ಕಾರ" ನಿರ್ಮಿಸಲು ಕರ್ನಾಟಕ ರಾಜ್ಯ ಸರಕಾರ ಕೇಂದ್ರ ಸರಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಗೆ ಅನುಮೋಧನೆ ನೀಡುವ ಬಗ್ಗೆ ಕ್ರಮ ಕೈಕೊಳ್ಳು, ಐತಿಹಾಸಿಕ ಕಿತ್ತೂರ ಪಟ್ಟಣದಿಂದ ಬೈಲಹೊಂಗಲ ಪಟ್ಟಣ ನಡುವೆ ರಸ್ತೆ ಸುಧಾರಣೆಗೆ ಕರ್ನಾಟಕ ರಾಜ್ಯ ಸರಕಾರ ಕೇಂದ್ರ ಸರಕಾರಕ್ಕೆ ಸಲ್ಲಿಸಿದ ರೂ. 160 ಕೋಟಿ ಪ್ರಸ್ತಾವನೆಗೆ ಅನುಮೋಧನೆ ನೀಡುವ ಬಗ್ಗೆ ಮನವಿ ಸಲ್ಲಿಸಿದರು.

ಮೂಡಲಗಿ ತಾಲೂಕಿನ ಸಂಕೇಶವರ ಸಂಗಮ್ ರಾಜ್ಯ ಹೆದ್ದಾರಿ-44 (ಚೈನೇಜ್ 35.54 ರಿಂದ 81.54) 46 ಕಿ ಮಿ ಅಂತರ ರಸ್ತೆ ಅಭಿವೃದ್ಧಿ ಗೊಳಿಸುವದು. (ಪ್ಯಾಕೇಜ-1) (Rigid Pavements Two Lanes + Paved Shoulders)

ನರಸಾಪೂರ-ಹೊಸಕೋಟಿ-ಬುದ್ದಿ-ಯಾದವಾಡ (ಜಿಲ್ಲಾ ಮುಖ್ಯ ರಸ್ತೆ) ಯನ್ನು ಸಿಮೆಂಟ ಫ್ಯಾಕ್ಟರಿ ಸೇರುವ ರಸ್ತೆ ದಿಂದ ಮೂಡಲಗಿ ತಾಲೂಕಿನ ಸಂಕೇಶವರ ಸಂಗಮ್ ರಾಜ್ಯ ಹೆದ್ದಾರಿ-44 ಸೇರುವ ಸುಮಾರು 6 ಕಿ ಮಿ ಅಂತರ ರಸ್ತೆ ಅಭಿವೃದ್ಧಿ ಗೊಳಿಸುವದು (ಪ್ಯಾಕೇಜ್ -2) (ಖುರ-ಂಜ ಕಚಿತಜಟಜಟಣ ಖಿತಿಠ ಐಚಿಟಿಜ + ಕಚಿತಜಜ ಖುಠಣಟಜಜಢಿ).

ಸಾರ್ವಜನಿಕರ ಹಿತಾ ದೃಷ್ಟಿಯಿಂದ ಮೇಲೆ ಪ್ರಸ್ತಾಪಿತ ಎಲ್ಲ ಕಾಮಗಾ-ರಿಗಳಿಗೆ ಅಗತ್ಯ ಅನಮೋದನೆ ಅನುಧಾನ ನೀಡುವ ಬಗ್ಗೆ ಮತ್ತು ಕಾಮಗಾರಗಳನ್ನು ಕೂಡಲೆ ಕೈಗೆತ್ತಿ ಕೊಳ್ಳುವ ಬಗ್ಗೆ ಅಗತ್ಯ ಕ್ರಮಕ್ಕಾಗಿ ಮಾನ್ಯ ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರು ನಿತಿನ ಗಡಕರಿ ಅವರನ್ನು ಬೆಳಗಾವಿ ನೂತನ ಸಂಸದರು ಜಗದೀಶ ಶೆಟ್ಟರ ಅವರು ಕೋರಿದರು.

ಮನೆಗೆ ಬಡಿದ ಸಿಡಿಲು: ಮನೆಯಲ್ಲಿದ್ದ ವಸ್ತುಗಳು ಭಸ್ಮ

ಕಲಬುರಗಿ: ಸಿಡಿಲು ಬಡಿದು ಮನೆಗೆ ಬೆಂಕಿ ತಗುಲಿದ ಘಟನೆ ಕಲಬುರಗಿ ತಾಲೂಕಿನ ಹೊನ್ನಕಿರಣಗಿ ಗ್ರಾಮದಲ್ಲಿ ನಡೆದಿದೆ. ಸ್ವಲ್ಪದ್ರಲ್ಲೇ ಭಾರೀ ಅನಾಹುತ ಕೈ ತಪ್ಪಿದೆ.

ರಾಜಕುಮಾರ್ ನಿಂಗಯ್ಯ ಕೋಣಿನ್ ಅವರ ಮನೆಗೆ ಸಿಡಿಲು ಬಡಿದಿದೆ. ಬೆಂಕಿಯ ಕೆನ್ನಾಲಿಗೆಗೆ ಮನೆ ಸುಟ್ಟು ಹೋಗಿದೆ.

ಫರಹತಾಬಾದ್ ಪೊಲೀಸ್ ಠಾಣಾವ್ಯಾಪ್ತಿ ಘಟನೆ ನಡೆದಿದೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿ ಬೆಂಕಿ ನಂದಿಸಿದ್ದಾರೆ.

ಹೆಚ್ಚುತ್ತಿರುವ ತಾಪಮಾನ ತಗ್ಗಿಸಲು ಗಿಡ ಬೆಳೆಸಿ: ಶಾಸಕ ಲಕ್ಷ್ಮಣ ಸವದಿ

ಅಥಣಿ: 'ಗಿಡಗಳನ್ನು ಹಚ್ಚುವುದು ಕೇವಲ ಪರಿಸರ ದಿನಾಚರಣೆಗೆ ಸೀಮಿತವಾಗಬಾರದು. ಗಿಡಗಳನ್ನು ನೆಟ್ಟು ಪೋಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಗಿಡ ಬೆಳೆಸುವುದರಿಂದ ಹೆಚ್ಚುತ್ತಿರುವ ತಾಪಮಾನ ತಗ್ಗಿಸಲು ಸಹಕಾ-ರಿಯಾಗುತ್ತದೆ' ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಇಲ್ಲಿನ ಆರ್.ಎಚ್.ಕುಲಕರ್ಣಿ ಸಭಾಂಗಣದಲ್ಲಿ ಅಥಣಿ ಮತ್ತು ಕಾಗವಾಡ ತಾಲ್ಲೂಕು ಸಹಕಾರಿ ಸಂಘಗಳ ಹಾಗೂ ವಿವಿಧ ಉದ್ದೇಶಗಳ ಗ್ರಾಮೀಣ ಪ್ರಾಥಮಿಕ ಕೃಷಿ ಸಹಕಾರ ಸಂಘಗಳ ಬ್ಯಾಂಕ್‌ಗಳ ಒಕ್ಕೂಟದ ಆಶ್ರಯದಲ್ಲಿ ಗ್ರಾಮ ಗ್ರಾಮಗಳಲ್ಲಿ ಸಹಕಾರ ಸಂಘಗಳ ಮುಖಾಂತರ 5,000 ಸಸಿಗಳ ವಿತರಣೆ ಹಾಗೂ ಪರಿಸರ ಸಂರಕ್ಷಣಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

'ಪ್ರತಿ ಗ್ರಾಮದಲ್ಲಿ ಎರಡರಿಂದ ನಾಲ್ಕು ಸಹಕಾರಿ ಸಂಘಗಳು ಇರುತ್ತವೆ. ಪ್ರತಿ ಸಂಘದ ಸದಸ್ಯರು ಮತ್ತು ಸಿಬ್ಬಂದಿ ಕನಿಷ್ಠ 10 ರಿಂದ 15 ಗಿಡಗಳನ್ನ ದತ್ತು ಪಡೆದು ತಮ್ಮ ಸಂಘದ ಆವರಣ, ಶಾಲೆ, ದೇವಸ್ಥಾನ, ರಸ್ತೆಬದಿ ಹೀಗೆ ಅನೇಕ ಸ್ಥಳಗಳಲ್ಲಿ ನೆಟ್ಟು, ಅವುಗಳನ್ನು ಪೋಷಿಸಬೇಕು' ಎಂದರು.

ಬೆಳಗಾವಿಯ ಸಹಕಾರಿ ಸಂಘಗಳ ಸಂಯುಕ್ತ ನಿಬಂಧಕ ಡಾ.ಸುರೇಶ್ ಗೌಡ ಮಾತನಾಡಿ, ವಿಜ್ಞಾನ ತಂತ್ರಜ್ಞಾನ ಬೆಳದಂತೆ ಮಾನವ ತನ್ನ ಸ್ವಾರ್ಥಕ್ಕಾಗಿ ಗಿಡ-ಮರಗಲನ್ನು ಕಡಿದು ಪರಿಸರವನ್ನು ನಾಶ ಮಾಡಿದ್ದಾನೆ. ತಂತ್ರಜ್ಞಾನದ ಅನೇಕ ದುಷ್ಪರಿಣಾಮಗಳಿಂದ ಪರಿಸರದ ಮೇಲೆ ಪರಿಣಾಮವಾಗುತ್ತಿದೆ' ಎಂದು ಹೇಳಿದರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ಚಿಕ್ಕೋಡಿ ಜಿಲ್ಲಾ ಘಟಕದ ಅಧ್ಯಕ್ಷ ಸಂಗಮೇಶ ಹಚಡದ ಉಪನ್ಯಾಸ ನೀಡಿ, ಅರಣ್ಯ ಇಲಾಖೆಯವರು ಸಸಿ ವಿತರಿಸುವುದಲ್ಲದೆ, ಅನೇಕ ಸಾರ್ವಜನಿಕ ಸ್ಥಳಗಳಲ್ಲಿ ಗಿಡಗಳನ್ನು ನೆಟ್ಟಿರುತ್ತಾರೆ. ಸಾರ್ವಜನಿಕರು ಅವುಗಳನ್ನು ಪೋಷಿಸುವ ಮೂಲಕ ಸಹಕರಿಸಬೇಕು' ಎಂದರು.

ಸರೋಜಿನಿ ಮಹಿಷಿ ವರದಿ ಜಾರಿಗಾಗಿ ಸಿಎಂಗೆ ಮನವಿ ಮಾಡುವೆ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಕರ್ನಾಟಕದ ಸರ್ಕಾರಿ, ಖಾಸಗಿ ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಕನ್ನಡಿಗರಿಗೆ ಹೆಚ್ಚಿನ ಉದ್ಯೋಗವಕಾಶ ಕಲ್ಪಿಸಲು ಸರೋಜಿನಿ ಮಹಿಷಿ ಪರಿಷ್ಕೃತ ವರದಿಯನ್ನು ರಾಜ್ಯ ಸರ್ಕಾರ ಕೂಡಲೇ ಜಾರಿಗೊಳಿಸಬೇಕು' ಎಂದು ಆಗ್ರಹಿಸಿ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ (ಟಿ.ಎ.ನಾರಾಯಣಗೌಡ ಬಣ) ಜಿಲ್ಲಾ ಘಟಕದ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ನಡೆಸುತ್ತಿದ್ದ ಧರಣಿ ಸ್ಥಳಕ್ಕೆ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಭೇಟಿ ನೀಡಿ ಮನವಿಯನ್ನು ಸ್ವೀಕ-ರಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸುತ್ತಿದ್ದ ಪ್ರತಿಭಟನಕಾರರು, ರಾಜ್ಯದಲ್ಲಿರುವ ಸರ್ಕಾರಿ, ಖಾಸಗಿ ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಕನ್ನಡಿಗರಿಗೇ ಆದ್ಯತೆ ಸಿಗಬೇಕು. ರಾಜ್ಯ ಸರ್ಕಾರ ರೂಪಿಸಿದ ಕಾನೂನು ಪರಿಣಾಮಕಾ-ರಿಯಾಗಿ ಅನುಷ್ಠಾನಗೊಳಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚಿನ ಅಧಿಕಾರ ನೀಡಬೇಕು' ಎಂದು ಸಚಿವರನ